ಸಂಪುಟ : 9 ಸಂಚಿಕೆ 44 ಪುಟ : 4 ಬೆಲೆ: 3.00 ಶನಿವಾರ ಮಾರ್ಚ್ 16 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

WALK IN INTERVIEW
Vacancy open
Bagalkot , Bijapur , Bidar , Kalaburgi, Mangalore , Belgaum
(Required For Bank Recovery and Collections)
- Filed collection Executive
- Two wheeler Must
- Salary up to 15000/- & Attractive Incentives Facility
Contact Number : 8310034934

Volume : 9 Issue : 44 Pages : 4 Price : 3.00 Saturday March 16 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 16ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 21, 22 ರಲ್ಲಿ ವಿಜಯನಗರ ಶಾಲೆ, ಶಿಗ್ಗಾವಿ ಲೇಔಟ್, ಕರುಗಲ್ ಲೇಔಟ್, ಟವರ್ ಕಂಬ, ವಾಲ್ಮೀಕಿ ಭವನ, ಪಾಟೀಲರ ಲೈನ್, ಕಮತರ್ ಲೈನ್, ಅಕ್ಕಿ ಅವರ ಪ್ಲಾಟ್. ಇನ್ನು ಕೆಲವು ಉಳಿದ ಭಾಗಗಳು

ವಾರ್ಡ್ ನಂ. 21,23,20, 19 ರಲ್ಲಿ ಜಂತ್ಲಿ ಅವರ ಲೈನ್, ಹೊಸ ಲೈನ್ ಮತ್ತು ಹಳೆ ಲೈನ್, ಕುಂಬಾರ ಲೈನ್, ಗಂಜಿ ಬಸವೇಶ್ವರ ಸರ್ಕಲ್ ಲೈನ್ ಪಡಗದವರ ಭಾಗ-1,2, ಸಿಂಧನೂರು ಅವರ ಎಸ್ ಟಿ ಡಿ, ಕೊಟ್ಟೂರು ಅವರ ಲೈನ್, ಬೇವಿನಮರದಮ್ಮ, ಹುಲಿಗೆಮ್ಮನ ಗುಡಿ,

ವಾರ್ಡ್ ನಂ. 34, 30 ವಡ್ಡರಗೇರಿ, ಮೂರಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, 46 ಪ್ಲಾಟ್, ಹನುಮಂತ ದೇವರಗುಡಿ, ಶಿವಾನಂದ ಗಾರ್ಡನ್, ಕಿತ್ತೂರಾಣಿ ಚೆನ್ನಮ್ಮ ಸರ್ಕಲ್‌ನ ಎದುರಿಗೆ, ವಾರ್ಡ್ ನಂ 6ರಲ್ಲಿ ಕನ್ಯಾಳ ಅಗಸಿ ಸುತ್ತಮುತ್ತಲಿನ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣ ಸಿಐಡಿಗೆ ವರ್ಗಾವಣೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪ್ರಕರಣದ ತನಿಖೆಯನ್ನು ಸಿಐಡಿಗೆ ವರ್ಗಾಯಿಸಿ ಆದೇಶ ಹೊರಡಿಸಲಾಗಿದೆ.

ಕರ್ನಾಟಕದ ಪೊಲೀಸ್ ಮಹಾನಿರ್ದೇಶಕರ ಕಚೇರಿಯು ಪ್ರಕರಣವನ್ನು ಅಪರಾಧ ತನಿಖಾ ಇಲಾಖೆಗೆ ವರ್ಗಾಯಿಸಲು ಆದೇಶಿಸಿದೆ. ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಪೋಕ್ಸೊ ಪ್ರಕರಣ ದಾಖಲಿಸಲಾಗಿದೆ.

### ನಟ ಪುನೀತ್ ರಾಜಕುಮಾರ ನೆನಪಿನಲ್ಲಿ 'ಹೃದಯ ಜ್ಯೋತಿ ಯೋಜನೆ'ಗೆ ಸಚಿವ ಗುಂಡೂರಾವ್ ಚಾಲನೆ

# ತಾಲೂಕಾಸ್ಪತ್ರೆಗಳಲ್ಲೂ 'ಹೃದಯ ಜ್ಯೋತಿ'

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ರಾಜ್ಯ ಕಂಡ ಅಪರೂಪದ ಮೇರು ನಟ, ಹೃದಯವಂತ ಪುನೀತ ರಾಜಕುಮಾರ ಅವರು ಹೃದಯಾಘಾತದಿಂದ ನಮ್ಮನ್ನಗಲಿದರು. ಅವರ ನೆನಪಿಗಾಗಿ ಬಡವರಿಗೆ, ಸಾರ್ವಜನಿಕರಿಗೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಹೃದಯ ಖಾಯಿಲೆಗೆ ತಕ್ಷಣದ ಚಿಕಿತ್ಸೆ, ವೈದ್ಯಕೀಯ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ರಾಜ್ಯ ಸರಕಾರವು ದೇಶದಲ್ಲಿಯೇ ಪ್ರಥಮ ಬಾರಿಗೆ 'ಡಾ.ಪುನೀತ್ ರಾಜಕುಮಾರ ಹೃದಯ ಜ್ಯೋತಿ' ಯೋಜನೆಯನ್ನು ಅನುಷ್ಠಾನಗೊಳಿಸಿದೆ ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ ಹೇಳಿದರು.



ಅವರು ಶುಕ್ರವಾರ ಬೆಳಿಗ್ಗೆ ಸತ್ತೂರಿನ ಡಾ. ಡಿ.ವೀರೇಂದ್ರ ಹೆಗ್ಗಡೆ ಕಲಾಕ್ಷೇತ್ರದಲ್ಲಿ ರಾಜ್ಯ ಸರಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಕಾರದಲ್ಲಿ ಆಯೋಜಿಸಿದ್ದ ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ ಹೃದಯ ಜ್ಯೋತಿ ಯೋಜನೆ ರಾಜ್ಯಮಟ್ಟದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




ಅನೇಕ ಸಂದರ್ಭಗಳಲ್ಲಿ ವ್ಯಕ್ತಿಗೆ ಹೃದಯಾಘಾತ ಆಗುವ ಸನ್ನಿವೇಶದಲ್ಲಿ ಆಸ್ಪತ್ರೆ ತಲುಪುವ ಮೊದಲೇ ಹೃದಯ ಬಡಿತ ನಿಂತು ಹೋಗುತ್ತದೆ. ತಾಲೂಕು ಆಸ್ಪತ್ರೆಗಳಲ್ಲಿ ಹೃದಯ ಸಂಬಂಧಿಸಿದ ಖಾಯಿಲೆಗಳಿಗೆ ತುರ್ತಾಗಿ ಸರಿಯಾದ ಚಿಕಿತ್ಸೆ ಲಭಿಸದೆ ಸಾವು ಸಂಭವಿಸುತ್ತವೆ. ಇದನ್ನು ತಡೆಗಟ್ಟಲು ಸರಕಾರ ತಾಲೂಕು ಆಸ್ಪತ್ರೆಗಳಿಗೂ ಹೃದಯ ಸಂಬಂಧಿ ಆರೋಗ್ಯ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ವಿಸ್ತರಿಸಲು 'ಹೃದಯ ಜ್ಯೋತಿ' ಯೋಜನೆಯನ್ನು ಜಾರಿಗೊಳಿಸಿದೆ ಎಂದು ಹೇಳಿದರು.

ಡಾ.ಪುನೀತ್ ರಾಜಕುಮಾರ ಹೃದಯ ಜ್ಯೋತಿ ಯೋಜನೆಯನ್ನು ಮೊದಲ ಹಂತದಲ್ಲಿ ರಾಜ್ಯದ 71 ತಾಲೂಕು ಆಸ್ಪತ್ರೆ ಮತ್ತು 15 ಜಿಲ್ಲಾ ಆಸ್ಪತ್ರೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ವಿವಿಧ ಜಿಲ್ಲಾ ಆಸ್ಪತ್ರೆಗಳ 65 ಹೃದಯ ತಜ್ಞ ವೈದ್ಯರು ಈ ಸೇವೆ ಅನುಷ್ಠಾನದಲ್ಲಿ ಆನ್‌ಲೈನ್ ಸಂಪರ್ಕದಲ್ಲಿದ್ದು ರೋಗಿಯ ಆರೋಗ್ಯ ಮತ್ತು ಜೀವ ರಕ್ಷಣೆಗೆ ತಮ್ಮ ಸಲಹೆ, ಮಾರ್ಗದರ್ಶನ ನೀಡಲಿದ್ದಾರೆ ಎಂದು ತಿಳಿಸಿದರು.

ಯೋಜನೆಯ ತರಬೇತಿ ಪುಸ್ತಕ ಬಿಡುಗಡೆ ಮಾಡಿದ ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವಸಂತೋಷ ಲಾಡ್ ಮಾತನಾಡಿ, ಇದೊಂದು ಮಾದರಿ ಯೋಜನೆಯಾಗಿದೆ. ಬಡವರಿಗೆ, ಗ್ರಾಮೀಣ ಜನರಿಗೆ ಬಹು ಉಪಯುಕ್ತವಾಗಿದೆ. ರಾಜ್ಯ ಸರಕಾರ ಬಡವರ, ಗ್ರಾಮೀಣರ, ಮಹಿಳೆಯರ ಮತ್ತು ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದವರ ಅಭಿವೃದ್ಧಿಗಾಗಿ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಸಂಧ್ಯಾ ಸುರಕ್ಷಾ, ವಿಕಲಚೇತನರ ಮತ್ತು ಇಂದಿರಾ ವೃದ್ಧಾಪ್ಯ ಮುಂತಾದ ಪಿಂಚಣಿ ಯೋಜನೆಗಳನ್ನು ಈ ಹಿಂದೆ ನಮ್ಮ ಸರಕಾರವೇ ಜಾರಿಗೊಳಿಸಿದೆ. ಅಸಹಾಯಕರ, ಬಡವರ ಅಭಿವೃದ್ಧಿಗೆ ನಮ್ಮ ಸರಕಾರ ಬದ್ಧವಾಗಿದೆ ಎಂದು ಹೇಳಿದರು.

▸▸ 3ನೇ ಪುಟಕ್ಕೆ

# ಗದಗ-ಹಾವೇರಿ ಕ್ಷೇತ್ರದ ಮುಖಂಡರ ಸಭೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

2024ನೇ ಸಾಲಿನ ಗದಗ-ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಅಧಿಕೃತವಾಗಿ ಘೋಷಿಸಿದ ಹಿನ್ನೆಲೆಯಲ್ಲಿ, ಬೆಂಗಳೂರಿನಲ್ಲಿ ಗದಗ-ಹಾವೇರಿ ಕ್ಷೇತ್ರದ ಎಲ್ಲ ಶಾಸಕರು ಹಾಗೂ ಮುಖಂಡರ ಸಭೆ ನಡೆಸಲಾಯಿತು.



ಈ ಸಂದರ್ಭದಲ್ಲಿ ಸಚಿವ ಎಚ್.ಕೆ. ಪಾಟೀಲ, ಹಾವೇರಿ ಶಾಸಕರು ಹಾಗೂ ಉಪಸಭಾಪತಿಗಳಾದ ರುದ್ರಪ್ಪ ಲಮಾಣಿ, ರೋಣ ಶಾಸಕ ಜಿ.ಎಸ್. ಪಾಟೀಲ, ಹಾನಗಲ್ ಶಾಸಕ ಶ್ರೀನಿವಾಸ ಮಾನೆ, ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ, ಹಿರೇಕೆರೂರ ಶಾಸಕ ಯು.ಬಿ. ಬಣಗಾರ, ರಾಣೇಬೆನ್ನೂರು ಶಾಸಕ ಪ್ರಕಾಶ ಕೋಳಿವಾಡ, ಲೋಕಸಭಾ ಮಾಜಿ ಸದಸ್ಯ ಐ.ಜಿ. ಸನದಿ ಸೇರಿದಂತೆ ಹಿರಿಯ ಮುಖಂಡರು ಉಪಸ್ಥಿತರಿದ್ದರು.


# ಕೆ.ಎಚ್. ಪಾಟೀಲ ಜನ್ಮ ಶತಮಾನೋತ್ಸವದ ಪ್ರಾರಂಭೋತ್ಸವ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಕಂಡ ಧೀಮಂತ ನಾಯಕ, ಮುತ್ಸದ್ಧಿಯ ರಾಜಕಾರಣಿ ದಿ. ಕೆ.ಚ್. ಪಾಟೀಲ ಜನ್ಮ ಶತಮಾನೋತ್ಸವದ ಪ್ರಾರಂಭೋತ್ಸವವು ಮಾರ್ಚ್ 16ರಂದು ಸಂಜೆ 4 ಗಂಟೆಗೆ ಹುಲಕೋಟಿಯ ಕೆ.ಎಚ್. ಪಾಟೀಲ ವಿದ್ಯಾಮಂದಿರದ ಪ್ರಾಂಗಣದಲ್ಲಿ ನೆರವೇರಲಿದೆ.

ಸಹಕಾರ ಸಚಿವ ಕೆ.ಎನ್. ರಾಜಣ್ಣ ಸಮಾರಂಭ ಉದ್ಘಾಟಿಸಲಿದ್ದಾರೆ. ಶ್ರೇಷ್ಠ ಮಾನವೀಯ ಸೇವೆಗಾಗಿ ನೀಡಲಾಗುವ 'ಕೆ.ಎಚ್. ಪಾಟೀಲ ಪ್ರಶಸ್ತಿ'ಯನ್ನು ಜಯದೇವ ಹೃದ್ರೋಗ ಆಸ್ಪತ್ರೆಯ ನಿವೃತ್ತ ನಿರ್ದೇಶಕ ಡಾ. ಸಿ.ಎನ್. ಮಂಜುನಾಥ ಅವರಿಗೆ ವಿ.ಪ ಸಭಾಪತಿ ಬಸವರಾಜ ಹೊರಟ್ಟಿ ಪ್ರದಾನ ಮಾಡಲಿದ್ದಾರೆ.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.




ಶತಮಾನೋತ್ಸವದ ಅಂಗವಾಗಿ ಕೆ.ಎಚ್. ಪಾಟೀಲ ಕಿಡ್ನಿ ಕೇರ್ ಉದ್ಘಾಟನೆ, ದಿ.ಗದಗ ಕೋ-ಆಪರೇಟಿವ್ ಕಾಟನ್ ಸೇಲ್ ಸೊಸೈಟಿಯ ಆಡಳಿತ ಮಂಡಳಿಯ ಕಟ್ಟಡ ಸಂಕೀರ್ಣದ ಭೂಮಿ ಪೂಜೆ, ಹುಲಕೋಟಿಯ ಶ್ರೀ ಮಾರುತಿ ದೇವಸ್ಥಾನದ ಸಮುದಾಯ ಭವನದ ಭೂಮಿ ಪೂಜೆ, ಹುಲಕೋಟಿಯಲ್ಲಿ ನೂತನ ಬಸ್ ನಿಲ್ದಾಣದ ಉದ್ಘಾಟನೆ ಮುಂತಾದ ರಚನಾತ್ಮಕ ಕಾರ್ಯಕ್ರಮಗಳು ನಡೆಯಲಿವೆ.

ಮುಖ್ಯ ಅತಿಥಿಗಳಾಗಿ ಮಾಜಿ ಸಭಾಪತಿ ಬಿ.ಎಲ್. ಶಂಕರ, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ, ಖನಿಜ ನಿಗಮದ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ತುಮಕೂರು ಸಂಸದ ಜಿ.ಎಸ್. ಬಸವರಾಜ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಎ.ಎಂ. ಹಿಂಡಸಗೇರಿ ಪಾಲ್ಗೊಳ್ಳುವರು.

ಅತಿಥಿಗಳಾಗಿ ಪ್ರಮುಖರಾದ ಪ್ರೊ. ಐ.ಜಿ. ಸನದಿ, ಆರ್.ಎಸ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದ್ದೇವರಮಠ ಪಾಲ್ಗೊಳ್ಳಲಿದ್ದಾರೆ.

ದಿ. ಕೆ.ಎಚ್. ಪಾಟೀಲರ ಅಭಿಮಾನಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕೆ.ಎಚ್. ಪಾಟೀಲ ಪ್ರತಿಷ್ಠಾನದ ಅಧ್ಯಕ್ಷ ಡಿ.ಆರ್. ಪಾಟೀಲರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಇಂದು ಹುಲಕೋಟಿ ನೂತನ ಬಸ್ ನಿಲ್ದಾಣ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗದಿಂದ ಹುಲಕೋಟಿ ನೂತನ ಬಸ್ ನಿಲ್ದಾಣದ ಉದ್ಘಾಟನಾ ಸಮಾರಂಭವು ಹುಲಕೋಟಿ ಬಸ್ ನಿಲ್ದಾಣದಲ್ಲಿ ಮಾರ್ಚ್ 16ರಂದು ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಕಾರ್ಯಕ್ರಮ ಉದ್ಘಾಟಿಸುವರು.

ರಾಜ್ಯ ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸರ್ಕಾರದ ಮುಖ್ಯ ಸಚೇತಕರು ಹಾಗೂ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ವಾಕರಸಾ ಸಂಸ್ಥೆ ಅಧ್ಯಕ್ಷರು ಹಾಗೂ ಕಾಗವಾಡ ಶಾಸಕ ಭರಮಗೌಡ ಕಾಗೆ, ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿದಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಹುಲಕೋಟಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ನಾಗರತ್ನ ಬಾಳಿಹಳ್ಳಿಮಠ, ಹುಲಕೋಟಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಅಬ್ದುಲ್ ಕರೀಮಸಾಬ ತಹಸೀಲ್ದಾರ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಕ.ರಾ.ರ.ಸಾ. ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಅನ್ಬುಕುಮಾರ್, ಸಾರಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಎನ್.ವಿ. ಪ್ರಸಾದ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಎಸ್.ಬಿ.ಶೆಟ್ಟೆಣ್ಣವರ, ವಾ.ಕ.ರ.ಸಾ.ನಿಗಮದ ವ್ಯವಸ್ಥಾಪಕ ನಿರ್ದೇಶಕ ಭರತ್ ಎಸ್, ಬೆಂಗಳೂರು ಮಹಾನಗರ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಮಚಂದ್ರನ್ ಆರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಾಬಾಸಾಬ ನೇಮಗೌಡ, ಕಲ್ಯಾಣ ಕ.ರ.ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಎಂ.ರಾಚಪ್ಪ ಆಗಮಿಸುವರು.

ವಾ.ಕ.ರ.ಸಾ.ಸಂಸ್ಥೆಯ ಗದಗ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ.ದೇವರಾಜ್, ವಾ.ಕ.ರ.ಸಾ.ಸಂಸ್ಥೆಯ ಮುಖ್ಯ ಕಾಮಗಾರಿ ಅಭಿಯಂತರರಾದ ದಿವಾಕರ ಯರಗೊಪ್ಪ ಸ್ವಾಗತ ಕೋರಿದ್ದಾರೆ.




ತಮಗೆಲ್ಲ ತುಂಬು ಹೃದಯದ ಸ್ವಾಗತ
ಕೆ. ಎಚ್. ಪಾಟೀಲ
ಜನ್ಮ ಶತಮಾನೋತ್ಸವದ ಪ್ರಾರಂಭೋತ್ಸವ

16 ನೇ ಮಾರ್ಚ್ 2024 ರಂದು ಶನಿವಾರ ಸಂಜೆ 4.00 ಗಂಟೆಗೆ
ಕೆ. ಎಚ್. ಪಾಟೀಲ ವಿದ್ಯಾಮಂದಿರದ ಪ್ರಾಂಗಣ, ಹುಲಕೋಟಿ

ಸಮಾರಂಭದ ಉದ್ಘಾಟನೆ ಹಾಗೂ ಜನ್ಮ ಶತಮಾನೋತ್ಸವದ ಚಾಲನೆ
ಶ್ರೀ ಕೆ. ಎನ್. ರಾಜಣ್ಣ
ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರಕಾರ

ಕೆ. ಎಚ್. ಪಾಟೀಲ ಪ್ರಶಸ್ತಿ ಪ್ರದಾನ
ಶ್ರೇಷ್ಠ ಮಾನವೀಯ ಸೇವೆಗಾಗಿ
ಡಾ. ಸಿ. ಎನ್. ಮಂಜುನಾಥ ಅವರಿಗೆ
ನಿವೃತ್ತ ನಿರ್ದೇಶಕರು, ಜಯದೇವ ಹೃದ್ರೋಗ ಆಸ್ಪತ್ರೆ, ಬೆಂಗಳೂರು
ಪ್ರಶಸ್ತಿ ಪ್ರದಾನ ಹಾಗೂ ಗೌರವಿಸುವವರು
ಶ್ರೀ ಬಸವರಾಜ ಹೊರಟ್ಟಿ
ಮಾನ್ಯ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್

ಶತಮಾನೋತ್ಸವದ ಅಂಗವಾಗಿ ಜರುಗಲಿರುವ ರಚನಾತ್ಮಕ ಕಾರ್ಯಕ್ರಮಗಳು
- ಕೆ. ಎಚ್. ಪಾಟೀಲ ಕಿಡ್ನಿ ಕೇರ್ ಉದ್ಘಾಟನೆ
- ದಿ ಗದಗ ಕೋ-ಆಪರೇಟಿವ್ ಕಾಟನ್ ಸೇಲ್ ಸೋಸಾಯಿಟಿಯ ಆಡಳಿತ ಮಂಡಳಿಯ ಕಟ್ಟಡ ಸಂಕೀರ್ಣದ ಭೂಮಿ ಪೂಜೆ
- ಹುಲಕೋಟಿಯ ಶ್ರೀ ಮಾರುತಿ ದೇವಸ್ಥಾನದ ಸಮುದಾಯ ಭವನದ ಭೂಮಿ ಪೂಜೆ
- ಹುಲಕೋಟಿಯಲ್ಲಿ ನೂತನ ಬಸ್ ನಿಲ್ದಾಣದ ಉದ್ಘಾಟನೆ

ಮುಖ್ಯ ಅತಿಥಿಗಳು
ಶ್ರೀ ಬಿ. ಎಲ್. ಶಂಕರ
ಮಾಜಿ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್
ಶ್ರೀ ಸಲೀಂ ಅಹ್ಮದ
ಮುಖ್ಯ ಸಚೇತಕರು, ಕರ್ನಾಟಕ ವಿಧಾನ ಪರಿಷತ್
ಶ್ರೀ ಜಿ. ಎಸ್. ಪಾಟೀಲ ಶಾಸಕರು, ರೋಣ
ಅಧ್ಯಕ್ಷರು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್
ಶ್ರೀ ಸಿ. ಸಿ. ಪಾಟೀಲ
ಮಾಜಿ ಸಚಿವರು ಹಾಗೂ ಶಾಸಕರು, ನರಗುಂದ
ಶ್ರೀ ಜಿ. ಎಸ್. ಬಸವರಾಜ ಸಂಸದರು, ತುಮಕೂರು
ಶ್ರೀ ಎಸ್. ವ್ಹಿ. ಸಂಕನೂರ ವಿಧಾನ ಪರಿಷತ್ ಸದಸ್ಯರು
ಡಾ. ಚಂದ್ರು ಲಮಾಣಿ ಶಾಸಕರು, ಶಿರಹಟ್ಟಿ
ಶ್ರೀ ಎ. ಎಂ. ಹಿಂಡಸಗೇರಿ ಮಾಜಿ ಸಚಿವರು

ಅಧ್ಯಕ್ಷತೆ
ಶ್ರೀ ಎಚ್. ಕೆ. ಪಾಟೀಲ
ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರು

ಅತಿಥಿಗಳು
ಪ್ರೊ ಶ್ರೀ ಐ. ಜಿ. ಸನದಿ ಮಾಜಿ ಸಂಸದರು
ಶ್ರೀ ಆರ್. ಎಸ್. ಪಾಟೀಲ ಮಾಜಿ ಸಂಸದರು
ಶ್ರೀ ಬಿ. ಆರ್. ಯಾವಗಲ್ ಮಾಜಿ ಸಚಿವರು
ಶ್ರೀ ಜಿ. ಎಸ್. ಗಡ್ಡದ್ದೇವರಮಠ ಮಾಜಿ ಶಾಸಕರು
ಕೆ. ಎಚ್. ಪಾಟೀಲರ ಅಭಿಮಾನಿ ಬಳಗವಾದ ತಾವು ಕಾರ್ಯಕ್ರಮಕ್ಕೆ ಆಗಮಿಸಿ ಶೋಭೆ ತರಲು ಕೋರುವೆವು.

ತಮ್ಮ ಸ್ವಾಗತ ಬಯಸುವವರು
ಡಿ. ಆರ್. ಪಾಟೀಲ
ಅಧ್ಯಕ್ಷರು, ಕೆ. ಎಚ್. ಪಾಟೀಲ ಪ್ರತಿಷ್ಠಾನ ಹಾಗೂ ಗದಗ ಪರಿಸರದ ಸಹಕಾರಿಗಳು

## ಬೆಂಗಳೂರು: ವಿಧಾನಸೌಧದ ಆವರಣದಲ್ಲಿ ಭುವನೇಶ್ವರಿ ದೇವಿ ಪ್ರತಿಮೆ ಸ್ಥಾಪಿಸಲು ಅನುಮತಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು:

ವಿಧಾನಸೌಧದ ಆವರಣದಲ್ಲಿ 'ಭುವನೇಶ್ವರಿ ದೇವಿಯ' ಪ್ರತಿಮೆ ಸ್ಥಾಪಿಸಲು ರಾಜ್ಯ ಸಚಿವ ಸಂಪುಟ ಗುರುವಾರ ನಿರ್ಧರಿಸಿದೆ. ಭುವನೇಶ್ವರಿ ದೇವಿಯನ್ನು ಕನ್ನಡ ಭಾಷೆಯ ಗುರುತು ಪ್ರತಿನಿಧಿಸುವ ದೇವತೆ ಎಂದು ಪರಿಗಣಿಸಲಾಗುತ್ತದೆ ಮತ್ತು ಇದನ್ನು ಕನ್ನಡ ತಾಯಿ (ಕನ್ನಡ ತಾಯಿ) ಎಂದು ಕರೆಯಲಾಗುತ್ತದೆ.

ಸಚಿವ ಸಂಪುಟ ಸಭೆಯ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ವಿಧಾನ ಸೌಧ ಸಂಕೀರ್ಣದ ಒಳಗಿನ ರಸ್ತೆಯುದ್ದಕ್ಕೂ ಕರ್ನಾಟಕ ಲೋಕಸೇವಾ ಆಯೋಗದ ಕಚೇರಿ ಎದುರುಗಡೆ 23 ಕೋಟಿ ವೆಚ್ಚದಲ್ಲಿ ಪ್ರತಿಮೆ ನಿರ್ಮಿಸಲಾಗುವುದು ಎಂದು ತಿಳಿಸಿದರು.

ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಈ ಪ್ರತಿಮೆಯನ್ನು ನಿರ್ಮಿಸಲಾಗುತ್ತಿದೆ ಎಂದು ಗೌಡ ಹೇಳಿದರು.ಪ್ರತಿಮೆಯನ್ನು ಪಂಚಲೋಹ ಅಥವಾ ಕಲ್ಲಿನಿಂದ ಮಾಡಬೇಕೇ ಎಂಬ ಬಗ್ಗೆ ಇನ್ನೂ ನಿರ್ಧರಿಸಲಾಗಿಲ್ಲ ಎಂದು ಅವರು ಹೇಳಿದರು. ಪ್ರತಿಮೆಯ ಬಳಿ ಥೀಮ್ ಆಧಾರಿತ ಉದ್ಯಾನವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಅವರು ಹೇಳಿದರು.


## ಕೊಯಮತ್ತೂರಿನಲ್ಲಿ ಪ್ರಧಾನಿ ಮೋದಿ ರೋಡ್‌ಶೋಗೆ ಮದ್ರಾಸ್ ಹೈಕೋರ್ಟ್ ಅನುಮತಿ

■ ವಿಜಯಸಾಕ್ಷಿ ಸುದ್ದಿ, ಚೆನ್ನೈ

ಕೊಯಮತ್ತೂರಿನಲ್ಲಿ ಮಾರ್ಚ್ 18ಕ್ಕೆ ನಿಗದಿಯಾಗಿರುವ ಪ್ರಧಾನಿ ನರೇಂದ್ರ ಮೋದಿ ಅವರ ರೋಡ್ ಶೋಗೆ ಮದ್ರಾಸ್ ಹೈಕೋರ್ಟ್ ಶುಕ್ರವಾರ ಅನುಮತಿ ನೀಡಿದೆ. ಭದ್ರತೆಯ ಕಾರಣ ನೀಡಿ ಕೊಯಮತ್ತೂರು ಪೊಲೀಸರು ಪ್ರಧಾನಿ ಮೋದಿ ರೋಡ್‌ಶೋಗೆ ಅನುಮತಿ ನಿರಾಕರಿಸಿದ್ದರು. ಇದನ್ನು ಪ್ರಶ್ನಿಸಿ ಬಿಜೆಪಿ ಜಿಲ್ಲಾಧ್ಯಕ್ಷ ಜೆ.ರಮೇಶ್ ಕುಮಾರ್ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ಏಕ ಸದಸ್ಯ ಪೀಠ, ಪ್ರಧಾನಿ ನರೇಂದ್ರ ಮೋದಿಯವರು ನಾಲ್ಕು ಕಿಮೀ ರೋಡ್ ಶೋ ನಡೆಸಲು ಬಿಜೆಪಿಗೆ ಕೆಲವು ಷರತ್ತುಗಳೊಂದಿಗೆ ಅನುಮತಿ ನೀಡುವಂತೆ ಕೊಯಮತ್ತೂರು ಪೊಲೀಸರಿಗೆ ಸೂಚಿಸಿದೆ. ಪ್ರಧಾನಿ ಮೋದಿ ಅವರು ಆರ್‌ಎಸ್ ಪುರಂನಲ್ಲಿ ಸಾರ್ವಜನಿಕ ಭಾಷಣದ ನಂತರ ಸೋಮವಾರ ಸಂಜೆ 4 ರಿಂದ 6 ಗಂಟೆಯವರೆಗೆ ಆರ್‌ಎಸ್ ಪುರಂನಲ್ಲಿರುವ ಏರು ಕಂಪನಿ ಜಂಕ್ಷನ್‌ನಿಂದ ಡಿಬಿ ರಸ್ತೆ ಜಂಕ್ಷನ್‌ವರೆಗೆ 4 ಕಿಲೋಮೀಟರ್ ರೋಡ್‌ಶೋ ನಡೆಸಲು ತಮಿಳುನಾಡು ಬಿಜೆಪಿ ಪೊಲೀಸರ ಅನುಮತಿ ಕೋರಿತ್ತು.

**ನಾಡು ಮೆಚ್ಚಿದ ಜನನಾಯಕ, ಸಹಕಾರ ರಂಗದ ಭೀಷ್ಮ ಕೆ.ಎಚ್. ಪಾಟೀಲರ ಜನ್ಮದಿನದ ನಿಮಿತ್ತ ಲೇಖನ**

# ಕೆಚ್ಚೆದೆಯ ನಾಯಕ ಕೆ.ಎಚ್. ಪಾಟೀಲ






ಕೆ.ಎಚ್. ಪಾಟೀಲ ಕನ್ನಡ ನಾಡು ಕಂಡ ಬಲು ಅಪರೂಪದ, ವರ್ಣರಂಜಿತ, ವ್ಯಕ್ತಿತ್ವದ, ಅಂಜಿಕೆ ಅರಿಯದ ಧೀಮಂತ ರಾಜಕಾರಣಿ. ಕೆ.ಎಚ್. ಪಾಟೀಲರದ್ದು ದಿಟ್ಟ ಹೋರಾಟಗಳಿಂದ ಕೂಡಿದ ಸಂಘರ್ಷಗಳಿಂದ ಕೂಡಿದ ಬದುಕು. ಬಾಲ್ಯದಿಂದಲೂ ಅವರಿಗೆ ಜನಹಿತವೇ ಪ್ರಧಾನ, ಸಮಷ್ಟಿಗಾಗಿ ಬದುಕುವುದೇ ಅವರ ಜೀವನದ ಧ್ಯೇಯ. 'ನೀನು ಮಾಡುವ ಕೆಲಸಗಳಿಂದ ಜನಹಿತ ಸಾಧಿತವಾಗುತ್ತಿದ್ದರೆ ಭಗವಂತನಿಗೂ ಅಂಜಬೇಡ' ಎಂದು ಸಾರಿ 'ಜನಹಿತವೇ ಜನಾರ್ಧನನ ಸೇವೆ' ಎಂದು ಬಾಳಿದರು.

ಮನುಷ್ಯ ಎಷ್ಟರ ಮಟ್ಟಿಗೆ ಒಳ್ಳೆಯದಕ್ಕಾಗಿ, ಸರ್ವರ ಹಿತಕ್ಕಾಗಿ, ಸಮಗ್ರ ಕಲ್ಯಾಣಕ್ಕಾಗಿ ದುಡಿಯುತ್ತಾನೋ ಅಷ್ಟರ ಮಟ್ಟಿಗೆ ಆತ ದೊಡ್ಡವನಾಗುತ್ತಾನೆ. ಕೆ.ಎಚ್. ಪಾಟೀಲರು ವಿರೋಧಿಗಳು ಸಹ ಬೆಕ್ಕಸ ಬೆರಗಾಗುವಂತೆ ಕೆಲಸ ಮಾಡಿದ್ದಾರೆ. ಕೆಲಸದ ಕೈಯಲ್ಲಿ ಅವರೆಂದೂ ಸೋತವರಲ್ಲ. ಸೋಲು ಎಂಬ ಪದ ಸೋಲಿಸಿದ ಧೈರ್ಯಶಾಲಿ. ಸದಾ ಸಂಕಷ್ಟಗಳನ್ನು ಎದುರಿಸಿದ ಅವರ ಎದುಗಾರಿಕೆ ಅನನ್ಯ ಅಸದೃಶ್ಯ. ಕೆ.ಎಚ್. ಪಾಟೀಲ ವ್ಯವಹಾರಿಕ ಅರ್ಥದಲ್ಲಿ ರಾಜಕಾರಣಿಯಾಗಿರಲಿಲ್ಲ. ಅವರೊಬ್ಬ ದಾರ್ಶನಿಕ ಧುರೀಣರು. ತಾವು ನಂಬಿದ ಸಿದ್ಧಾಂತವನ್ನು ಅನುಷ್ಠಾನಗೊಳಿಸುವ ಸಂದರ್ಭದಲ್ಲಿ ವೈಯಕ್ತಿಕ ಲಾಭಹಾನಿ ಲೆಕ್ಕಾಚಾರ ಮಾಡಿದವರಲ್ಲ.

ಕೆ.ಎಚ್. ಪಾಟೀಲರ ಗುರಿ, ರೈತರ ಹಿತ ಕಾಪಾಡುವುದಾಗಿತ್ತು. ರೈತರು ಎಲ್ಲ ರೀತಿಯ ಶೋಷಣೆಯಿಂದ ಮುಕ್ತಗೊಳಿಸುವುದಾಗಿದ್ದಿತು. ರೈತಾಪಿ ವರ್ಗದ ಜನರನ್ನು ವಿದ್ಯಾವಂತವರನ್ನಾಗಿ ಮಾಡುವುದಲ್ಲ, ಸ್ಪರ್ಧಾತ್ಮಕ ಪ್ರಪಂಚದಲ್ಲಿ ಹೋರಾಟಕ್ಕೆ ಸಿದ್ಧಪಡಿಸುವುರಾಗಿದ್ದಿತು. ಆರ್ಥಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಅವರನ್ನು ಸಶಕ್ತರನ್ನಾಗಿ ಮಾಡುವುದರ ಜೊತೆಗೆ ಆರೋಗ್ಯಶಾಲಿ ಗ್ರಾಮೀಣ ಸಮಾಜ ಕಟ್ಟುವುದೇ ಅವರ ಕನಸಾಗಿದ್ದಿತು. ಆ ಕನಸು ಸಾಕಾರಗೊಳಿಸಲು ಅವರು ನಿರಂತರ ಪ್ರಯತ್ನಶೀಲರಾಗಿದ್ದರು. ಕೆ.ಎಚ್. ಪಾಟೀಲ ಕಾಯಕಯೋಗಿ ಜೀವನ ನಡೆಸಿದರು.

ಪ್ರಪಂಚದ 100 ದೇಶಗಳ ಸದಸ್ಯತ್ವದ ಸಹಕಾರಿ ಸಂಘಟನೆ ಅಧ್ಯಕ್ಷಗಿರಿ ಅವರಿಗೆ ದೊಡ್ಡದಾಗಿರಲಿಲ್ಲ. ರಾಜ್ಯ, ರಾಷ್ಟ್ರಮಟ್ಟದ ಸಹಕಾರಿ ಸಂಘಟನೆಗಳ ಮುಖ್ಯಸ್ಥರಾಗಿ ಸಹಕಾರ ರತ್ನರಾದರೂ ಅವರು ಮಾತ್ರ ಅಪ್ಪಟ ಹಳ್ಳಿಯ ವ್ಯಕ್ತಿಯಾಗಿದ್ದರು. ಹಳ್ಳಿಗರ ನಿಷ್ಠುರತೆ, ಸತ್ಯ ಸಂಧತೆ, ಸರಳತೆ ಸಜ್ಜನಿಕೆ, ಎದೆಗುಂದದೆ ಮುನ್ನುಗ್ಗುವ ಸ್ವಭಾವ ಲಾಭಹಾನಿಯ ಲೆಕ್ಕಾಚಾರ ಹಾಕದ ಮುಗ್ಧತೆ, ಪ್ರಸಂಗಾವಧಾನ, ಅವರ ಜೀವನದಲ್ಲಿ ಹಾಸು ಹೊಕ್ಕಾಗಿದ್ದವು. 'ಭಯಗೊಂಡರೆ ಭಯವಿಲ್ಲ' ಎನ್ನುತ್ತಿದ್ದ ಕೆ.ಎಚ್. ಪಾಟೀಲ 'ಅಂಜಿ ಅಂಜಿ ದಿನವೂ ಸಾಯುವುದಕ್ಕಿಂತ ಧೈರ್ಯದಿಂದ ಹೋರಾಡಿ ಬದುಕಬೇಕು' ಎಂದು ಹೇಳುತ್ತಿದ್ದರಷ್ಟೇ ಅಲ್ಲ, ಅದರಂತೆಯೇ ಬಾಳಿದರು.

ಕೆ.ಎಚ್. ಪಾಟೀಲರು, ಆಡಳಿತದಲ್ಲಿ ನಿಪುಣರು, ಸಂಘಟನೆಯಲ್ಲಿ ಚತುರರು, ದಾರ್ಶನಿಕ ಚಿಂತಕರು. ಸಚಿವರಾಗಿ ಪಕ್ಷದ ಮುಖ್ಯಸ್ಥರಾಗಿ, ಹಿರಿಯ ಸಹಕಾರಿಯಾಗಿ, ಇದನ್ನು ಅವರು ಸಾಬೀತು ಮಾಡಿದರು. ತಮಗೆ ಅನ್ಯಾಯವಾಗಿದೆ ಎಂದೆನಿಸಿದಾಗ, ತಮ್ಮ ಆತ್ಮಗೌರವ ಕಾಪಾಡಿಕೊಳ್ಳಲು ತಮ್ಮ ಸಮರ ತಾವೇ ಏಕಾಂಗಿಯಾಗಿ ನಡೆಸಿದ ಛಲವಂತರು. 1954ರಲ್ಲಿ ಎಐಸಿಸಿ ಸದಸ್ಯರಾಗಿ ಆವಡಿ ಅಧಿವೇಶನದಲ್ಲಿ ಪಾಲ್ಗೊಂಡಿದ್ದರು. ಕೆ.ಎಚ್. ಪಾಟೀಲರು ಕೆಪಿಸಿಸಿ ಅಧ್ಯಕ್ಷತೆ ಚಲಾವಣೆಯಲ್ಲಿ ನಿಜಲಿಂಗಪ್ಪ ವಿರೋಧಿ ಬಣದಲ್ಲಿದ್ದರು. ಇದು ಅವರಿಗೆ ರಾಜಕೀಯವಾಗಿ ಬಹಳ ಅನಾನುಕೂಲತೆಗಳನ್ನು ಸೃಷ್ಟಿಸಿದರೂ ಅದನ್ನ ಲೆಕ್ಕಿಸದೇ ಮುನ್ನಡೆದರು.


ರೈತ ಪಕ್ಷಪಾತಿಯಾಗಿದ್ದ ಕೆ.ಎಚ್. ಪಾಟೀಲರು ದಿ ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿಯನ್ನು ನೈಜವಾದ ಅರ್ಥದಲ್ಲಿ ರೈತಪರ ಸಂಸ್ಥೆಯನ್ನಾಗಿ ಕಟ್ಟಿದರು. ಎಪಿಎಮ್‌ಸಿ ಚೇರಮನ್‌ರಾಗಿ ಶೋಷಣೆರಹಿತ ಮಾರಾಟ ವ್ಯವಸ್ಥೆ ರೂಪಿಸಲು ಭದ್ರ ಬುನಾದಿ ಹಾಕಿದರು. ಗ್ರಾಮೀಣ ಉಗ್ರಾಣಗಳನ್ನು ರೈತರ ಲಕ್ಷ್ಮೀ ಮಂದಿರಗಳೆಂದು ಸಾರಿ ತಮ್ಮ ಪರಿಸರದ ಹಳ್ಳಿಗಳಲ್ಲಿ ಗ್ರಾಮೀಣ ಗುದಾಮುಗಳನ್ನು ಕಟ್ಟಿದರು. ಸಾಹಿತ್ಯಾಭಿಮಾನಿಯಾಗಿ 1961ರಲ್ಲಿ ಗದಗದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನದ ಸ್ವಾಗತಾಧ್ಯಕ್ಷರಾದರು. ನಾಡಿಗೆ ಕರ್ನಾಟಕ ಎಂದು ನಾಮಕರಣ ಮಾಡಬೇಕೆಂದು 1973ರಲ್ಲಿ ಅದನ್ನು ಸಾಧಿಸುವಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸಿದರು. ಕೆ.ಎಚ್. ಪಾಟೀಲರು ಎದುರು ಹಾಕಿಕೊಂಡಿದ್ದು ಬಲಿಷ್ಠರನ್ನು, ನಿಜಲಿಂಗಪ್ಪ, ದೇವರಾಜ ಅರಸ, ಇಂದಿರಾಗಾಂಧಿ ಅವರನ್ನು ಡಿಕ್ಕಿಹೊಡೆದು ರಾಜಕೀಯ ಮಾಡಿದರು.

ಧನಬಲವುಳ್ಳವರ ವಿರೋಧ ಕಟ್ಟಿಕೊಂಡು, ಬಡವರನ್ನು, ದುರ್ಬಲರನ್ನು, ಧ್ವನಿ ಇಲ್ಲದವರನ್ನು ಬೆನ್ನಿಗೆ ಹಾಕಿಕೊಂಡು ಹೋರಾಡಿದರು. ವಿಶಾಲ ಕರ್ನಾಟಕ ದಿನಪತ್ರಿಕೆ, ನಂದಾದೀಪ ವಾರಪತ್ರಿಕೆ ಪ್ರಾರಂಭಿಸಿದ, ಲೇಖಕರಾಗಿ, ಚಿಂತಕರಾಗಿ ಲೋಕಶಿಕ್ಷಣ ಕೆಲಸ ಮಾಡಿದ ಕೆ.ಎಚ್. ಪಾಟೀಲರ ತ್ವರಿತಗತಿಯಿಂದ ಕೆಲಸ ಮಾಡುವ ಕಾರ್ಯಶೈಲಿಯಿಂದ 'ಬುಲ್ಡೋಜರ್' ಖ್ಯಾತಿ ಗಳಿಸಿದರು. ತಮ್ಮ ಸಂಘಟನಾ ಚಾತುರ್ಯ ಹಾಗೂ ಸಹಕಾರದ ಬಗೆಗಿನ ಅವರ ಬದ್ಧತೆಯ ಫಲವಾಗಿ ಹುಲಕೋಟಿ ಪರಿಸರದಲ್ಲಿ 'ಸಹಕಾರದ ಓಯಾಸಿಸ್' ಸಹಕಾರ ಕಾಶಿ ಕಟ್ಟಿ ಸಹಕಾರ ಭೀಷ್ಮರೆನಿಸಿದರು.

ಕೆ.ಎಚ್. ಪಾಟೀಲರ ಉಸಿರೇ ಸಹಕಾರ, ರೈತನೇ ಹೃದಯ, ಗ್ರಾಮ ಹಾಗೂ ಕೃಷಿ ಅವರ ಎರಡು ಪುಪ್ಪಸಗಳು. ಕೈಗಾರಿಕೆ ಹಾಗೂ ಶಿಕ್ಷಣ ಅವರ ಕಣ್ಣುಗಳು. ರಚನಾತ್ಮಕ ಕೆಲಸಗಳೇ ಕಾರ್ಯಗಳು, ಅವಿಶ್ರಾಂತ ಶ್ರಮ ಅವರ ಬಲಿಷ್ಠ ಬಾಹುಗಳು. ಅವರ ನಿಲುವು ಛಲದ್ದು, ಅವರ ಬದುಕು ಹೋರಾಟದ್ದು, ಶೋಷಣೆರಹಿತ ಸಮಾಜ ಕಟ್ಟುವ ಸುಂದರ ಕನಸುಗಾರ. ಅವರಿಗೆ ರಾಜಕೀಯ ಒಂದು ಸಾಧನವಾಗಿದ್ದಿತೇ ಹೊರತು ಅದೇ ಗುರಿಯಾಗಿರಲಿಲ್ಲ. ಅವರ ನರನಾಡಿಗಳಲ್ಲಿ ಹರಿದಾಡಿದ್ದು ಮಾನವೀಯ ಅನುಕಂಪ. ಅದಕ್ಕಾಗಿಯೇ ಅವರು ಬಲು ಅಪರೂಪದ ರಾಜಕಾರಣಿ ಭಯ ಗೆದ್ದು ಬದುಕಿದ ಎಂಟೆದೆಯ ಬಂಟ.

– ಜಗನ್ನಾಥ ಜಮಾದಾರ.

## ಆನೆಗೊಂದಿ ಉತ್ಸವದಲ್ಲಿ ತೆಲ್ಲೂರರ ಕಥಾಕೀರ್ತನ



■ ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಆನೆಗೊಂದಿ ಉತ್ಸವದಲ್ಲಿ ಗದುಗಿನ ಹಿರಿಯ ಸಂಗೀತ ಕಲಾವಿದರೂ, ಕುಮಾರವ್ಯಾಸ ಪ್ರಶಸ್ತಿ ಪುರಸ್ಕೃತರೂ ಆದ ಸಿದ್ಧೇಶ್ವರ ಶಾಸ್ತ್ರಿಗಳು ತೆಲ್ಲೂರ ಅವರು ಪ್ರಸ್ತುತಪಡಿಸಿದ ರಾಮಕೃಷ್ಣ ಪರಮಹಂಸರ ಕಥಾಕೀರ್ತನವು ಜನಮನ ಸೆಳೆಯಿತು.

ಸಂಗೀತ ಸಹ ಕಲಾವಿದರಾದ ಹನಮಂತಕುಮಾರ ಮೇಟಿ ಹಾಗೂ ಪ್ರತಾಪ ಹಿರೇಮಠ ಅವರು ಕಥಾಕೀರ್ತನಕ್ಕೆ ಸಂಗೀತ ಸಾಥ್ ನೀಡಿದರು. ವೇದಿಕೆಯ ಮುಂಭಾಗದಲ್ಲಿ ಮಾಜಿ ಸಚಿವರೂ, ಹಾಲಿ ಶಾಸಕರೂ ಆದ ಜನಾರ್ಧನ ರೆಡ್ಡಿ, ಜಿಲ್ಲಾಧಿಕಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಸೇರಿದಂತೆ ಗಣ್ಯರು, ಕಲಾಭಿಮಾನಿಗಳು ಕಥಾಕೀರ್ತನ ಆಲಿಸಿದರು. ಸಮಾರಂಭದಲ್ಲಿ ತೆಲ್ಲೂರ ಅವರಿಗೆ ಸ್ಮರಣಿಕೆ ಹಾಗೂ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

# ರಾಷ್ಟ್ರೀಯ ಸುರಕ್ಷತಾ ಸಪ್ತಾಹ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

53ನೇ ರಾಷ್ಟ್ರೀಯ ಸುರಕ್ಷಾ ಸಪ್ತಾಹದ ಅಂಗವಾಗಿ ಹೊಸಪೇಟೆ ಸ್ಟೀಲ್ ಲಿ. ಕಂಪನಿಯ ಟೌನಶಿಪ್‌ನ ಪ್ರೇಮಜ್ಯೋತಿ ಕಲಾ ಮಂದಿರದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಸುರಕ್ಷಾ ದಿನಾಚರಣೆಯ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ಕಂಪನಿಯ ಸಿಓಓ ಸುಭಾಂಕರ ಪಾಲ್ ವಹಿಸಿದ್ದರು.

ಅತಿಥಿಗಳಾಗಿ ಕೊಪ್ಪಳ ವಿಭಾಗದ ಕಾರ್ಖಾನೆಗಳ ಉಪ ನಿರ್ದೇಶಕ ವಿಜಯಕುಮಾರ ಪಾಲ್ಗೊಂಡು, ಸುರಕ್ಷತೆಯ ಪಾಲನೆ ಮತ್ತು ಅನುಷ್ಠಾನದ ಕುರಿತು ಮಾತನಾಡಿದರು. ವೇದಿಯ ಮೇಲೆ ಹೊಸಪೇಟೆ ಸ್ಟೀಲ್ ಲಿ. ಕಂಪನಿಯ ಅಧಿಕಾರಿಗಳಾದ ಚಂದ್ರಶೇಖರ್ ಬೆಲ್ಲದ, ನಾಗರಾಜ್ ದುಂಡಿ, ಪಿ.ಎಲ್. ಸತೀಶ್, ವಿಜಯಕುಮಾರ್ ಗುಪ್ತಾ, ಟಿ. ಶ್ರೀನಿವಾಸಲು, ಶಂಕರಗೌಡರು ಹಾಗೂ ಭಾಸ್ವರರಾಯ್ ಉಪಸ್ಥಿತರಿದ್ದರು.





ರಾಷ್ಟ್ರೀಯ ಸುರಕ್ಷಾ ದಿನಾಚರಣೆ ನಿಮಿತ್ತ ಏರ್ಪಡಿಸಿದ್ದ ಸುರಕ್ಷತಾ ಸ್ಪರ್ಧೆಗಳಲ್ಲಿ ವಿಜೇತರಾದ ಕಂಪನಿಯ ನೌಕರರಿಗೆ ಗಣ್ಯರು ಪ್ರಶಸ್ತಿ ಫಲಕ ಮತ್ತು ಬಹುಮಾನವನ್ನು ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಎಚ್.ಎಸ್. ಭಂಗಿ ಸುರಕ್ಷತೆಯ ಕುರಿತಾದ ಸುರಕ್ಷಾ ಗೀತೆಯನ್ನು ಹಾಡಿ ಗಮನ ಸೆಳೆದರು.

ಸುರಕ್ಷತಾ ವಿಭಾಗದ ಅಧಿಕಾರಿ ಚಂದ್ರಶೇಖರ್ ಬೆಲ್ಲದ ಪ್ರಾಸ್ತಾವಿಕವಾಗಿ ಮಾತನಾಡಿದರು. ನಾಗಶ್ರೀ ಮತ್ತು ಪಾಯಲ್ ನಿರ್ವಹಿಸಿದರು.

## ಹಾಸನ: ಯಡೇಗೌಡನಹಳ್ಳಿ- ಅರ್ಜುನಹಳ್ಳಿ ಚತುಷ್ಪಥ ರಸ್ತೆ ನಿರ್ಮಾಣಕ್ಕೆ ಕೇಂದ್ರ 576 ಕೋಟಿ ರೂ. ಮಂಜೂರು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ-748ಎ ಬೆಳಗಾವಿ-ಹುನಗುಂದ-ರಾಯಚೂರು ವಿಭಾಗದ ಚತುಷ್ಪಥ ರಸ್ತೆಯಾಗಿ ಉನ್ನತೀಕರಿಸಲು ಹೆದ್ದಾರಿ ಸಚಿವಾಲಯ 2,675.31 ಕೋಟಿ ರೂ. ಮಂಜೂರು ಮಾಡಿದೆ.



ಈ ಉಪಕ್ರಮವು ಒಟ್ಟು 92.40 ಕಿಮೀ ಉದ್ದದ ಹೆದ್ದಾರಿಯನ್ನು ಒಳಗೊಂಡಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.


ಈ ಯೋಜನೆಯು ಪಣಜಿ-ಹೈದರಾಬಾದ್ EC10 ಕಾರಿಡಾರ್‌ನ ಅವಿಭಾಜ್ಯ ಅಂಗವಾಗಿದೆ ಎಂದು ಅವರು ಹೇಳಿದ್ದಾರೆ.

EC10 ಮೀನುಗಾರಿಕೆ ಮತ್ತು ಪ್ರವಾಸೋದ್ಯಮಕ್ಕೆ ಹೆಸರು ವಾಸಿಯಾಗಿರುವ ಪಣಜಿ, ಆಹಾರ ಧಾನ್ಯಗಳು ಮತ್ತು ಹಾಲಿನ ಉತ್ಪನ್ನಗಳಿಗೆ ಹೆಸರು ವಾಸಿಯಾಗಿರುವ ಬೆಳಗಾವಿ; ಅಕ್ಕಿ, ಹತ್ತಿ, ಶೇಂಗಾ, ಮತ್ತು ಬೇಳೆಕಾಳುಗಳಿಗೆ ಹೆಸರು ವಾಸಿಯಾಗಿರುವ ರಾಯಚೂರು ಮತ್ತು ಐಟಿ, ಫಾರ್ಮ್ ಮತ್ತು ಹೆಲ್ತ್‌ಕೇರ್‌ಗೆ ವಿಶಿಷ್ಟ ಸ್ಥಾನ ಪಡೆದಿರುವ ಹೈದರಾಬಾದ್ ಸೇರಿದಂತೆ ಪ್ರಮುಖ ಕೈಗಾರಿಕಾ ಕೇಂದ್ರಗಳನ್ನು ಸಂಪರ್ಕಿಸುತ್ತದೆ.

## ಡಾಂಬರು ಮಿಶ್ರಣ ಘಟಕದಿಂದ ಪರಿಸರ ಮಾಲಿನ್ಯ: ರಾಜ್ಯ ಸರ್ಕಾರ, KSPCBಗೆ ಹೈಕೋರ್ಟ್ ನೋಟಿಸ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೋಲಾರ ತಾಲ್ಲೂಕಿನ ಮೇಡಿಹಾಳದ ಬಳಿ ಸ್ಥಾಪಿಸಲಾಗಿರುವ ಡಾಂಬರು ಮಿಶ್ರಣ ಘಟಕದಿಂದ ಪರಿಸರ ಮಾಲಿನ್ಯ ಉಂಟಾಗುತ್ತಿದೆ ಎಂದು ದೂರಲಾದ ಅರ್ಜಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಮತ್ತು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಗೆ (ಕೆಎಸ್‌ಪಿಸಿಬಿ) ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.



ಧನಮಂತನಹಳ್ಳಿಯ ಕೆ ಮಂಜುನಾಥ್ ಮತ್ತಿತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರ ನೇತೃತ್ವದ ವಿಭಾಗೀಯ ಪೀಠ ಬುಧವಾರ ವಿಚಾರಣೆ ನಡೆಸಿತು.

ಪ್ರಕರಣದ ಎಲ್ಲಾ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿದ ಪೀಠವು ಆಕ್ಷೇಪಣೆ ಸಲ್ಲಿಸುವಂತೆ ಸೂಚಿಸಿ ವಿಚಾರಣೆಯನ್ನು ಏಪ್ರಿಲ್ 1ಕ್ಕೆ ಮುಂದೂಡಿದೆ. ಅರ್ಜಿದಾರರ ಪರ ನರೇಶ್ ಸಂತೋಷ್ ವಾದ ಮಂಡಿಸಿದರು.

ಕೋಲಾರ ತಾಲ್ಲೂಕಿನ ಮೇಡಿಹಾಳದ ಸರ್ವೆ ನಂಬರ್ 59 ರಲ್ಲಿ ಮೆಸರ್ಸ್ ಪ್ರಶಾಂತ್ ಕ್ರಶರ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿ ಸ್ಥಾಪಿಸಿರುವ ಹಾಟ್ ಮಿಕ್ಸ್ ಘಟಕದಿಂದ ಭಾರಿ ಮಾಲಿನ್ಯವಾಗುತ್ತಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.

ಈ ಘಟಕದಿಂದಾಗಿ ಸುತ್ತಮುತ್ತಲ ಗ್ರಾಮಸ್ಥರು ಮತ್ತು ಸನಿಹದಲ್ಲೆ ಇರುವ ಶಾಲಾ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದೆ. ಕೃಷಿ ಬೆಳೆಗಳು ಹಾಳಾಗುತ್ತಿವೆ. ಈ ಬಗ್ಗೆ ಸ್ಥಳೀಯ ಶಾಲಾ ಮುಖ್ಯ ಶಿಕ್ಷಕರು ಮಾಲಿನ್ಯ ನಿಯಂತ್ರಣ ಮಂಡಳಿಗೆ ಪತ್ರ ಬರೆದಿದ್ದಾರೆ.

## 'ನೀರು ಉಳಿಸಿ, ಬೆಂಗಳೂರು ಬೆಳೆಸಿ' ಅಭಿಯಾನ; ನೀರನ್ನು ವಿವೇಚನೆಯಿಂದ ಬಳಸಿ: ಡಿಕೆ ಶಿವಕುಮಾರ್ ಸಲಹೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬರದ ಸಂದರ್ಭದಲ್ಲಿ ನಾವೆಲ್ಲರೂ ಜವಾಬ್ದಾರಿಯುತವಾಗಿ ಮತ್ತು ವಿವೇಚನೆಯಿಂದ ನೀರನ್ನು ಬಳಸಬೇಕು ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.

'ನೀರು ಉಳಿಸಿ, ಬೆಂಗಳೂರು ಬೆಳೆಸಿ' ಅಭಿಯಾನಕ್ಕೆ ಚಾಲನೆ ನೀಡಿ, ಅಂತರ್ಜಲ ಮತ್ತು ನೀರಿನ ಸಂರಕ್ಷಣೆಗೆ ಃಘಖಃ ಅಭಿವೃದ್ಧಿಪಡಿಸಿದ ನಾಲ್ಕು ಮೊಬೈಲ್ ಅಪ್ಲಿಕೇಶನ್‌ಗಳನ್ನು ಬಿಡುಗಡೆ ಮಾಡಿ ಮಾತನಾಡಿದರು.

'ಬೆಂಗಳೂರು ನಗರ ಈ ವರ್ಷ ಮಳೆಯಿಲ್ಲದೆ ತತ್ತರಿಸಿದೆ. ನಗರದಲ್ಲಿ 6,900 ಕೊಳವೆ ಬಾವಿಗಳು ಬತ್ತಿ ಹೋಗಿದ್ದು, ಉಳಿದ 7,000 ಕೊಳವೆ ಬಾವಿಗಳು ಕಾರ್ಯನಿರ್ವಹಿಸುತ್ತಿವೆ. ಹೀಗಾಗಿ ನೀರಿನ ವಿವೇಚನಾಯುಕ್ತ ಬಳಕೆ ಬಗ್ಗೆ ಜಾಗೃತಿ ಮೂಡಿಸಬೇಕು. ಕೊಳವೆಬಾವಿಗಳ ನೀರಿನ ಬಳಕೆ ಮೇಲೆ ನಿಗಾ ಇಡಲು ಪ್ರಯತ್ನಿಸಲಾಗುತ್ತಿದೆ. ಯಾರಾದರೂ ಹೊಸ ಕೊಳವೆಬಾವಿ ಕೊರೆಯಲು, ಬಿಡಬ್ಲ್ಯುಎಸ್‌ಎಸ್‌ಬಿ ಅನುಮತಿ ಪಡೆಯಬೇಕು' ಎಂದರು.




'ಅಧಿಕಾರಿಗಳು ಬೆಂಗಳೂರಿನ ಖಾಸಗಿ ಟ್ಯಾಂಕರ್‌ಗಳನ್ನು ನೋಂದಾಯಿಸಿದ್ದಾರೆ ಮತ್ತು ಟ್ಯಾಂಕರ್‌ಗಳಿಗೆ ಸರ್ಕಾರವು ಸಬ್ಸಿಡಿ ದರವನ್ನು ನಿಗದಿಪಡಿಸಿದೆ. ಟ್ಯಾಂಕರ್‌ಗಳನ್ನು ನೋಂದಾಯಿಸುವ ಮೂಲಕ ಟ್ಯಾಂಕರ್ ನೀರು ಸರಬರಾಜು ಹೆಸರಿನಲ್ಲಿ ನಡೆಯುತ್ತಿದ್ದ ದಂಧೆಯನ್ನು ಪರಿಣಾಮಕಾರಿಯಾಗಿ ನಿಲ್ಲಿಸಿದ್ದಾರೆ' ಎಂದು ಹೇಳಿದರು.

ನೀರಿನ ಅಭಾವ ಪರಿಸ್ಥಿತಿಯನ್ನು ಸರ್ಕಾರ ಉತ್ತಮವಾಗಿ ನಿರ್ವಹಿಸುತ್ತಿದೆ. ಮುಂಬರುವ ಸಾರ್ವತ್ರಿಕ ಚುನಾವಣೆಯ ಕಾರಣ ಈ ವಿಷಯದ ಬಗ್ಗೆ ಸಾಕಷ್ಟು ಪ್ರಚಾರ ಮತ್ತು ರಾಜಕೀಯ ನಡೆಯುತ್ತಿದೆ. ನಾವು ಅದರ ಬಗ್ಗೆ ತಲೆಕೆಡಿಸಿಕೊಳ್ಳಬಾರದು ಮತ್ತು ಸಮಸ್ಯೆಯನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಚುನಾವಣೆ ನೀತಿ ಸಂಹಿತೆ ಏನೇ ಬಂದರೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳುತ್ತೇವೆ ಎಂದರು.

ಎಲ್ಲೆಲ್ಲಿ ನೀರಿನ ಕೊರತೆ ಇದೆಯೋ ಅಲ್ಲಿ ನೀರು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬಿಡಬ್ಲ್ಯುಎಸ್‌ಎಸ್‌ಬಿ ಅಧ್ಯಕ್ಷ ಡಾ.ವಿ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ನಗರದಲ್ಲಿ ಪ್ರಸ್ತುತ ನೀರಿನ ಸಮಸ್ಯೆ ಕುರಿತು ವಿವರಿಸಿ, ಸಾರ್ವಜನಿಕರು ಸಹಕರಿಸಿದರೆ ಮಾತ್ರ ನೀರಿನ ಸಮಸ್ಯೆ ನೀಗಿಸಲು ಸಾಧ್ಯ ಎಂದರು.

## ವಿನಾಕಾರಣ ತೇಜೋವಧೆ ಮಾಡುವುದು ಸರಿಯಲ್ಲ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಿನಾಕಾರಣ ಒಬ್ಬರ ತೇಜೋವಧೆ ಮಾಡುವುದು ಸರಿಯಲ್ಲ ಪ್ರಕರಣ ದಾಖಲಾದ ಕೂಡಲೇ ದೋಷಿ, ನಿರ್ದೋಷಿ ಎಂದು ಹೇಳುವುದು ಸರಿಯಲ್ಲ ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಅವರು ಶುಕ್ರವಾರ ಹೇಳಿದರು.



ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಮೇಲೆ ದಾಖಲಾಗಿರುವ ಪೋಕ್ಸೋ ಪ್ರಕರಣ ಕುರಿತಂತೆ ಪ್ರತಿಕ್ರಿಯೆ ನೀಡಿದ ಅವರು, ಈ ಪ್ರಕರಣದ ಬಗ್ಗೆ ಹೆಚ್ಚಿಗೆ ಮಾತನಾಡುವುದಿಲ್ಲ. ಸರಿಯಾಗಿ ತನಿಖೆಯಾಗಬೇಕು. ವಿನಾಕಾರಣ ಯಾರನ್ನೂ ತೇಜೋವಧೆ ಮಾಡುವುದು ಸರಿಯಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಕಾಂಗ್ರೆಸ್ 20 ಲೋಕಸಭಾ ಕ್ಷೇತ್ರಗಳನ್ನು ಗೆಲ್ಲುವುದು ಖಚಿತ. ಇದೀಗ ಸಿಎಎ ತೆಗೆದುಕೊಂಡು ಬಂದಿದ್ದಾರೆ. ಕಳೆದ 10 ವರ್ಷದಲ್ಲಿ ಇವರ ಅಭಿವೃದ್ಧಿ ಶೂನ್ಯ. ಹೀಗಾಗಿಯೇ ಚುನಾವಣೆ ಸಂದರ್ಭದಲ್ಲಿ ಇಂತಹ ವಿಷಯಗಳನ್ನು ತಂದು ಜನರ ಮನಸ್ಸನ್ನು ಬೇರೆಡೆಗೆ ಸೆಳೆಯುವ ಕೆಲಸ ಬಿಜೆಪಿ ನಾಯಕರು ಮಾಡುತ್ತಿದ್ದಾರೆಂದು ಕಿಡಿಕಾರಿದರು.

## ಬಿಎಸ್‌ವೈ ವಿರುದ್ಧ ದೂರು ನೀಡಿದ ಮಹಿಳೆ ಮಾನಸಿಕ ಅಸ್ವಸ್ಥೆಯೆಂಬ ಮಾಹಿತಿಯಿದೆ: ಜಿ.ಪರಮೇಶ್ವರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧ ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಪೋಕ್ಸೋ ಕಾಯ್ದೆಯಡಿ ಕೇಸು ದಾಖಲಾಗಿರುವ ಬಗ್ಗೆ ಮಾಧ್ಯಮ ಪ್ರತಿನಿಧಿಗಳಿಗೆ ಗೃಹ ಸಚಿವ ಡಾ ಜಿ ಪರಮೇಶ್ವರ್ ಹೇಳಿಕೆ ನೀಡಿದ್ದಾರೆ.

ಮಾಜಿ ಸಿಎಂ ಯಡಿಯೂರಪ್ಪನವರ ವಿರುದ್ಧ ನಿನ್ನೆ ರಾತ್ರಿ ಮಹಿಳೆ ಕೈಬರಹದ ಬದಲಾಗಿ ಟೈಪ್ ಮಾಡಿ ಪೊಲೀಸರಿಗೆ ದೂರು ನೀಡಿದ್ದಾರೆ. ಇದೊಂದು ಸೂಕ್ಷ್ಮ ವಿಚಾರವಾಗಿರುವುದರಿಂದ ಗೃಹ ಇಲಾಖೆ ಸಂಪೂರ್ಣ ಮಾಹಿತಿ ತೆಗೆದುಕೊಂಡು ತನಿಖೆ ಮಾಡುತ್ತೇವೆ. ತನಿಖೆ ಆಗುವವರೆಗೆ ಯಾವುದೇ ವಿಷಯ ಮಾತನಾಡುವುದಿಲ್ಲ ಎಂದಿದ್ದಾರೆ.



ದೂರು ನೀಡಿರುವ ಮಹಿಳೆ ಮಾನಸಿಕ ಅಸ್ವಸ್ಥೆ ಎಂಬ ಮಾಹಿತಿ ನಮಗೆ ಸಿಕ್ಕಿದ್ದು, ತನಿಖೆಯ ನಂತರವಷ್ಟೇ ಸ್ಪಷ್ಟ ಚಿತ್ರಣ ಸಿಗಲಿದೆ. ಇದೊಂದು ಸೂಕ್ಷ್ಮ ವಿಚಾರ. ಇದು ಹಿರಿಯ ರಾಜಕಾರಣಿಯಾಗಿರುವ ಮಾಜಿ ಸಿಎಂಗೆ ಸಂಬಂಧಿಸಿದ್ದು. ಪೊಲೀಸರು ದೂರು ತೆಗೆದುಕೊಂಡು ತನಿಖೆ ಆರಂಭಿಸಿದ್ದಾರೆ, ತನಿಖೆ ಪೂರ್ಣಗೊಳ್ಳುವವರೆಗೆ, ಎಚ್ಚರಿಕೆಯಿಂದ ಮಾತನಾಡಬೇಕಾಗುತ್ತದೆ ಎಂದರು.

# ಬೆರಳಚ್ಚು ಕಂಪ್ಯೂಟರ್ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಬೆರಳಚ್ಚು ಮತ್ತು ಕಂಪ್ಯೂಟರ್ ವಾರ್ಷಿಕ ಪರೀಕ್ಷೆಯಲ್ಲಿ ಇಲ್ಲಿನ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯವು ಶೇ.90.5 ಫಲಿತಾಂಶ ಸಾಧಿಸಿದೆ.

ಇಂಗ್ಲೀಷ್ ಬೆರಳಚ್ಚು ಜೂನಿಯರ್ ವಿಭಾಗದಲ್ಲಿ ಝಿಯಾತಸ್ಲೀಮ ಎಂ. ಬಿಜಾಪೂರ ಶೇ.88.5, ಸ್ವಾತಿ ಎಂ.ಮೇರವಾಡೆ ಶೇ.83.5, ಇಂಗ್ಲೀಷ್ ಬೆರಳಚ್ಚು ಪ್ರೌಢ ದರ್ಜೆಯಲ್ಲಿ ತೌಸೀಫ್ ಗ. ಮುಲ್ಲಾ ಶೇ.89, ಸಾನೀಯಾ ಜಿ.ಕಲಾಲ ಶೇ.85, ಕನ್ನಡ ಬೆರಳಚ್ಚು ಜೂನಿಯರ್ ವಿಭಾಗದಲ್ಲಿ ಪೂಜಾ ಎಂ.ಬೆಳದಡಿ ಶೇ.87, ಜಯಂತಿ ನೀಲಗಾರ ಶೇ.82.5, ಕನ್ನಡ ಬೆರಳಚ್ಚು ಪ್ರೌಢದರ್ಜೆ ವಿಭಾಗದಲ್ಲಿ ಅಖಿಲಾ ಎ.ಸೋಟಕನಲ್ ಶೇ.83.5, ಗಣೇಶ ಕಮ್ಮಾರ ಶೇ.77.5 ಫಲಿತಾಂಶ ಪಡೆದಿದ್ದಾರೆ.

ಕಂಪ್ಯೂಟರ್ ಆಫೀಸ್ ಆಟೋಮೇಷನ್ ವಿಭಾಗದಲ್ಲಿ ಮೇಘಾ ಬಿ.ಹರ್ತಿ ಶೇ87, ಗ್ರಾಫಿಕ್ ಡಿಸೈನರ್ ಕೋರ್ಸ್‌ನಲ್ಲಿ ಚಂದ್ರಶೇಖರ ಆರ್.ಕುಸಲಾಪೂರ ಶೇ.74 ಸೇರಿದಂತೆ ಪ್ರಥಮ ದರ್ಜೆಯಲ್ಲಿ 22 ವಿದ್ಯಾರ್ಥಿಗಳು, ದ್ವಿತೀಯ ದರ್ಜೆಯಲ್ಲಿ 14 ವಿದ್ಯಾರ್ಥಿಗಳು, ಉಳಿದ 15 ವಿದ್ಯಾರ್ಥಿಗಳು ಉತ್ತಮ ಅಂಕದೊಂದಿಗೆ ಉತ್ತೀರ್ಣರಾಗಿದ್ದು, ವಿದ್ಯಾಲಯದ ಫಲಿತಾಂಶವು ಶೇ.90.5 ಆಗಿದೆ.

ಸಾಧಕ ವಿದ್ಯಾರ್ಥಿಗಳಿಗೆ ವಿದ್ಯಾಲಯದ ಪ್ರಾಚಾರ್ಯ ಡಾ. ತಯಬಅಲಿ ಅ.ಹೊಂಬಳ ಅಭಿನಂದಿಸಿದ್ದಾರೆ.

# ಸಂಸದ ಹೆಗಡೆ ವಿರುದ್ಧ ಕ್ರಮಕ್ಕೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನದ ವಿರುದ್ಧವಾಗಿ ವಿವಾದಾತ್ಮಕ ಹೇಳಿಕೆ ನೀಡಿರುವ ಸಂಸದ ಅನಂತಕುಮಾರ್ ಹೆಗಡೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಶಿಕ್ಷೆ ನೀಡಬೇಕೆಂದು ರಾಜ್ಯ ಸರ್ಕಾರಕ್ಕೆ ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲೆಯ ಅಧ್ಯಕ್ಷ ಎಮ್.ಎಮ್. ಕುರ್ತಕೋಟಿ ಮನವಿ ಮಾಡುವ ಮೂಲಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಮಾ.20ರಿಂದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ

# 'ಶ್ರೀ ಜಗದ್ಗುರು ರೇಣುಕಾಚಾರ್ಯ' ಪ್ರಶಸ್ತಿ ಪ್ರದಾನ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದಲ್ಲಿ ಮಾರ್ಚ್ 20ರಿಂದ 26ರವರೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಜಾತ್ರಾ ಮಹೋತ್ಸವ ಜರುಗಲಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಮಾ. 20ರ ಬೆಳಿಗ್ಗೆ 11.30ಕ್ಕೆ ಎನ್.ಆರ್.ಪುರ ತಾಲೂಕ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನವನ್ನು ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ರಾಜ್ಯಾಧ್ಯಕ್ಷ ಸಿ.ಎನ್. ಅಶೋಕ ಉದ್ಘಾಟಿಸುವರು. ಚಿಕ್ಕಮಗಳೂರು ಜಿಲ್ಲಾಧ್ಯಕ್ಷ ಮಲ್ಲಿಗೆ ಸುದೀರ್, ಹಾಸನ ಜಿಲ್ಲಾಧ್ಯಕ್ಷ ಗಂಗಾಧರ್, ಗ್ರಾ.ಪಂ. ಅಧ್ಯಕ್ಷ ಸದಾಶಿವ ಆಚಾರಿ, ಕೆ.ಟಿ. ವೆಂಕಟೇಶ್, ನವದೆಹಲಿಯ ಕು.ರಕ್ಷಿತ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಸುಳ್ಳದ ಶಿವಸಿದ್ಧರಾಮೇಶ್ವರ ಶ್ರೀಗಳು, ಬೇರುಗಂಡಿ ರೇಣುಕ ಮಹಂತ ಶ್ರೀಗಳು ಉಪಸ್ಥಿತರಿರುವರು.

ಸಂಜೆ 6.30ಕ್ಕೆ ಮಕ್ಕಳ ಸಾಹಿತ್ಯ ಸಮ್ಮೇಳನವನ್ನು ಚಿಕ್ಕಮಗಳೂರು ಕ.ಸಾ.ಪ. ಅಧ್ಯಕ್ಷ ಸೂರಿ ಶ್ರೀನಿವಾಸ ಉದ್ಘಾಟಿಸುವರು. ಎಡೆಯೂರು ರೇಣುಕ ಶ್ರೀಗಳು ಸ್ಟೇಷನ್ ಬಬಲಾದ್ ಶಿವಮೂರ್ತಿ ಶ್ರೀಗಳು ಉಪದೇಶಾಮೃತ ನೀಡುವರು. ಕ.ರಾ.ಮ.ಸಾ ಪರಿಷತ್ತು ಕಾರ್ಯಾಧ್ಯಕ್ಷ ಸಿ.ಮಹದೇವ, ಜಿಲ್ಲಾ ಅಧ್ಯಕ್ಷ ಮಲ್ಲಿಗೆ ಸುದೀರ್, ಜಿ.ಪಂ. ಮಾಜಿ ಉಪಾಧ್ಯಕ್ಷ ಎಂ.ಎಸ್. ಚನ್ನಕೇಶವ ಮುಖ್ಯ ಅತಿಥಿಗಳಾಗಿರುವರು. ಮಾ. 21ರಂದು ಸಂಜೆ 'ಸಾವಯವ ಕೃಷಿ-ಒಂದು ಚಿಂತನ' ಗೋಷ್ಠಿಯನ್ನು ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಉದ್ಘಾಟಿಸಲಿದ್ದು, ಮುಖ್ಯ



ಅತಿಥಿಗಳಾಗಿ ರಾಜ್ಯ ಬಿ.ಜೆ.ಪಿ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಶಾಸಕ ಜಗದೀಶ ಗುಡಗುಂಟಿ, ಮಾಜಿ ಸಚಿವ ಶಂಕರ ಪಾಟೀಲ ಮುನೇನಕೊಪ್ಪ, ಮಾಜಿ ಶಾಸಕ ಕೆ.ಎಸ್. ಲಿಂಗೇಶ್, ರೈತ ಮುಖಂಡ ಹೆಚ್. ಆರ್. ಬಸವರಾಜ್, ನಂದಗೋಕುಲದ ಆನಂದ ಆಷೀಷರ್, ಎಸ್.ಎಸ್. ಜ್ಯೋತಿಪ್ರಕಾಶ್, ಎನ್. ಜೆ. ರಾಜಶೇಖರ ಭಾಗವಹಿಸುವರು. ಬಂಕಾಪುರ ರೇವಣಸಿದ್ಧೇಶ್ವರ ಶ್ರೀಗಳು, ಹುಕ್ಕೇರಿ ಚಂದ್ರಶೇಖರ ಶ್ರೀಗಳು, ನೆಗಳೂರು ಗುರುಶಾಂತೇಶ್ವರ ಶ್ರೀಗಳು ಪಾಲ್ಗೊಳ್ಳುವರು.

ಮಾ. 22ರಂದು ಬೆಳಿಗ್ಗೆ 11.30ಕ್ಕೆ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ-ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಉದ್ಘಾಟಿಸುವರು. ಬಾಗಲಕೋಟೆಯ ಡಾ. ಮಹಾಜಬೀನ ಎಸ್.ಮಧುರಕರರಿಗೆ 'ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ' ಪ್ರದಾನ ಮಾಡಲಾಗುವುದು.

ಮುಖ್ಯ ಅತಿಥಿಗಳಾಗಿ ಸಚಿವರಾದ ಕೆ.ಜೆ. ಜಾರ್ಜ್, ಈಶ್ವರ ಖಂಡ್ರೆ, ಲಕ್ಷ್ಮೀ ಹೆಬ್ಬಾಳಕರ, ಎನ್.ಎಸ್. ಬೋಸರಾಜ್, ಡಾ. ಶರಣ ಪ್ರಕಾಶ ಪಾಟೀಲ, ಸಂಸದ ಬಿ.ವೈ. ರಾಘವೇಂದ್ರ, ಶಾಸಕ ಟಿ.ಡಿ. ರಾಜೇಗೌಡರು, ಎ.ಬಿ. ಸುದರ್ಶನ್, ಹೆಚ್.ಬಿ. ರಾಜಗೋಪಾಲ, ಸುಧೀರ ಕುಮಾರ್ ಮುರೋಳಿ ಭಾಗವಹಿಸುವರು. ಎಮ್ಮಿಗನೂರು ವಾಮದೇವ ಮಹಂತ ಶ್ರೀಗಳು, ಅಮ್ಮಿನಭಾವಿ ಅಭಿನವ ಶಾಂತಲಿಂಗ ಶ್ರೀಗಳು, ಸಿದ್ಧರಬೆಟ್ಟದ ವೀರಭದ್ರ ಶ್ರೀಗಳು, ಗೌರಿಗದ್ದೆ ಅವಧೂತ ಆಶ್ರಮದ ವಿನಯ ಗುರೂಜಿ ಉಪಸ್ಥಿತರಿರುವರು.

ಮಾ. 23ರಂದು ಸಂಜೆ 'ಯುವ ಜನಾಂಗದಲ್ಲಿ ಧರ್ಮ ಪ್ರಜ್ಞೆ-ರಾಷ್ಟ್ರ ಪ್ರಜ್ಞೆ' ಸಮಾರಂಭವನ್ನು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸಂಸದ ಪ್ರಜ್ವಲ ರೇವಣ್ಣ, ಮಾಜಿ ಸಚಿವ ಸಿ.ಸಿ. ಪಾಟೀಲ, ಶಾಸಕ ಹೆಚ್.ಕೆ. ಸುರೇಶ್, ಮಾಜಿ ಸಚಿವರಾದ ಸಿ.ಟಿ. ರವಿ, ಡಿ.ಎನ್. ಜೀವರಾಜ್, ಮಾಜಿ ಶಾಸಕರಾದ ಬೆಳ್ಳಿ ಪ್ರಕಾಶ, ಡಿ.ಎಸ್. ಸುರೇಶ ಆಗಮಿಸುವರು. ಸೂಡಿ ಡಾ. ಕೊಟ್ಟೂರು ಬಸವೇಶ್ವರ ಶ್ರೀಗಳು, ಹರಪನಹಳ್ಳಿ ವರಸದ್ಯೋಜಾತ ಶ್ರೀಗಳು ಪಾಲ್ಗೊಳ್ಳುವರು.

ಮಾ.24ರಂದು ಸಂಜೆ ಜಾನಪದ ಹಬ್ಬವನ್ನು ಜಾನಪದ ತಜ್ಞ ಡಾ.ರಾಮು ಮೂಲಗಿ ಉದ್ಘಾಟಿಸಲಿದ್ದು, ಶಾಸಕರಾದ ಹೆಚ್.ಡಿ. ತಮ್ಮಯ್ಯ, ಡಿ.ಹೆಚ್. ಶ್ರೀನಿವಾಸ, ಮಾಜಿ ವಿ.ಪ. ಸದಸ್ಯೆ ಗಾಯತ್ರಿ ಶಾಂತೇಗೌಡರು, ಲಿಂಗಸುಗೂರು ಮಾತಾ ನಂದಿಕೇಶ್ವರಿ ಅಮ್ಮನವರು, ರೋಟರಿ ಸಂಸ್ಥೆ ಗವರ್ನರ್ ಬಿ.ಸಿ. ಗೀತಾ,' ಬೀರೂರು ಶಿವಸ್ವಾಮಿ ಮುಖ್ಯ ಅತಿಥಿಗಳಾಗಿರುವರು. ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶ್ರೀಗಳು, ಶಿರಕೋಳ ಗುರುಸಿದ್ದೇಶ್ವರ ಶ್ರೀಗಳು ಪಾಲ್ಗೊಳ್ಳುವರು.

ಮಾ. 25ರಂದು ಸಂಜೆ ನೈತಿಕ ಮೌಲ್ಯಗಳ ಸಂರಕ್ಷಣೆ ಸಮಾರಂಭವನ್ನು ಮೈಸೂರು ಡಾ. ಮುಮ್ಮಡಿ ಚಂದ್ರಶೇಖರ ಶ್ರೀಗಳು ಉದ್ಘಾಟಿಸುವರು. ಕವಲೇದುರ್ಗ ಮರುಳಸಿದ್ಧ ಶ್ರೀಗಳು, ಬೀರೂರು ರುದ್ರಮುನಿ ಶ್ರೀಗಳು, ಚಿಕ್ಕಮಗಳೂರು ಚಂದ್ರಶೇಖರ ಶ್ರೀಗಳು, ರಾಯಚೂರು ಶಾಂತಮಲ್ಲ ಶ್ರೀಗಳು, ಶ್ರೀನಿವಾಸ ಸರಡಗಿ ರೇವಣಸಿದ್ಧೇಶ್ವರ ಶ್ರೀಗಳು, ರಾಯಚೂರು ಅಭಿನವ ರಾಚೋಟೇಶ್ವರ ಶ್ರೀಗಳು ಉಪಸ್ಥಿತರಿರುವರು. ಮಾ.26ರಂದು ಭದ್ರಾ ನದಿ ತೀರದಲ್ಲಿ ಸುರಗಿ ಸಮಾರಾಧನೆಯೊಂದಿಗೆ ಸಮಾರಂಭ ಮಂಗಲಗೊಳ್ಳುವುದಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ತಿಳಿಸಿದ್ದಾರೆ.



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರ ಪ್ರಾಧಿಕಾರದ ನೂತನ ಅಧ್ಯಕ್ಷರಾಗಿ ಅಕ್ಬರ್ ಸಾಬ್ ಬಬರ್ಚಿ ಆಯ್ಕೆಯಾದರು. ಗದಗ ಕಾಂಗ್ರೆಸ್ ಸಾಮಾಜಿಕ ಜಾಲತಾಣದ ಜಿಲ್ಲಾ ಕಾರ್ಯದರ್ಶಿ ವಿನೋದ ಶಿದ್ಲಿಂಗ, ಉಮೇಶ್ ದಲಬಂಜನ, ಸುರೇಶ್ ಕುಮಾರ್ ಬದಿ, ನಾಗರಾಜ ಶಿದ್ಲಿಂಗ, ಆನಂದ ಖಟವಟೆ, ಸತೀಶ್ ಖಟವಟೆ, ಮಾದುಸಾ ಬದಿ, ರಮೇಶ್ ಖೋಡೆ ಸೇರಿದಂತೆ ಗೆಳೆಯರ ಬಳಗದವರು ಅಕ್ಬರ್ ಸಾಬ್‌ರನ್ನು ಆತ್ಮೀಯವಾಗಿ ಸನ್ಮಾನಿಸಿದರು.

## ಸಂಕಲ್ಪ ಕಿಡ್ನಿ ಕೇರ್‌ನಲ್ಲಿ 'ವಿಶ್ವ ಕಿಡ್ನಿ ದಿನಾಚರಣೆ' ಕಾರ್ಯಕ್ರಮ

# ಕಿಡ್ನಿ ಸ್ವಾಸ್ಥ್ಯಕ್ಕಾಗಿ ಸಂಕಲ್ಪ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಿಡ್ನಿ ಸ್ವಾಸ್ಥ್ಯಕ್ಕಾಗಿ ನಾವಿಂದು ನಮ್ಮ ಜೀವನಶೈಲಿಯಲ್ಲಿ ಬದಲಾವಣೆ ತಂದುಕೊಳ್ಳಲು ಸಂಕಲ್ಪ ಮಾಡುವ ಅಗತ್ಯ ಹಾಗೂ ಅನಿವಾರ್ಯತೆಯಿದೆ ಎಂದು ಗದುಗಿನ ಹಿರಿಯ ತಜ್ಞ ವೈದ್ಯ ಡಾ.ಕುಶಾಲ ಗೋಡಖಿಂಡಿ ಅಭಿಪ್ರಾಯಪಟ್ಟರು.

ಅವರು ಗುರುವಾರ ಗದುಗಿನ ಸಂಕಲ್ಪ ಕಿಡ್ನಿ ಕೇರ್‌ನಲ್ಲಿ ಏರ್ಪಡಿಸಿದ್ದ ವಿಶ್ವ ಕಿಡ್ನಿ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಮನುಷ್ಯನ ದೇಹ ರಚನೆಯಲ್ಲಿ ಮೂತ್ರಪಿಂಡ ಅತ್ಯಂತ ಮಹತ್ವದ್ದಾಗಿದೆ. ದೇಹದಲ್ಲಿನ ನಿರುಪಯುಕ್ತ ದ್ರವ ಪದಾರ್ಥವನ್ನು ಹೊರಹಾಕುವಲ್ಲಿ ಈ ಮೂತ್ರಪಿಂಡಗಳು ಪರಿಣಾಮಕಾರಿ ಕಾರ್ಯ ಮಾಡುವವು. ಕಿಡ್ನಿಯನ್ನು ಫಿಲ್ಟರ್ ಎಂದೆನ್ನಬಹುದು. ಕಿಡ್ನಿಯಲ್ಲಿ ತೊಂದರೆಗಳು ಕಂಡು ಬಂದಲ್ಲಿ ಆರೋಗ್ಯದ ಮೇಲೆ ಪರಿಣಾಮವಾಗುತ್ತದೆ.





ಆಗಾಗ ತಜ್ಞ ವೈದ್ಯರ ಬಳಿ ತಪಾಸಣೆ ಮಾಡಿಸಿಕೊಳ್ಳಬೇಕು. ಮೂತ್ರದಲ್ಲಿ ರಕ್ತ ಬಂದರೆ ಅಲಕ್ಷ್ಯ ಬೇಡ. ಅಧಿಕ ರಕ್ತದೊತ್ತಡ ಹಾಗೂ ನೋವು ನಿವಾರಕ ಮಾತ್ರೆಗಳ ಸೇವನೆಯಿಂದ ಕಿಡ್ನಿ ಹಾನಿಯಾಗುವದು. ಆದ್ದರಿಂದ ಸದೃಢ ಆರೋಗ್ಯದಿಂದ ಸದೃಢ ಕಿಡ್ನಿ ರೂಪುಗೊಳ್ಳಲು ಸಾಧ್ಯ.

ನಿಯಮಿತ ಆಹಾರ-ನೀರು ಸೇವನೆ, ಲಘು ವ್ಯಾಯಾಮ, ವಾಯುವಿಹಾರ ಮಾಡಿ ಎಂದರಲ್ಲದೆ, ಕಿಡ್ನಿ ಕಸಿ ಮಾಡಲು ವೈದ್ಯಕೀಯ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆಗಳು ಬಂದಿದೆ ಎಂದರು.


ಅತಿಥಿಯಾಗಿ ಆಗಮಿಸಿದ್ದ ವಿದ್ಯಾದಾನ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಮಾತನಾಡಿ, ಗದಗ ಪರಿಸರದಲ್ಲಿ ಸಂಕಲ್ಪ ಕಿಡ್ನಿ ಕೇರ್ ಸೆಂಟರ್ ಉತ್ತಮ ಕಾರ್ಯ ಮಾಡುತ್ತಿದೆ ಎಂದರು. ಸಂಕಲ್ಪ ಕಿಡ್ನಿ ಕೇರ್‌ನ ಡಾ.ಅವಿನಾಶ್ ಓದುಗೌಡರ ಕಿಡ್ನಿ ಸಂರಕ್ಷಣೆ, ಮುಂಜಾಗ್ರತಾ ಕ್ರಮ, ಕಿಡ್ನಿ ಕಸಿ, ವೈದ್ಯಕೀಯ ಆರೈಕೆ ವಿಷಯವಾಗಿ ವಿಶ್ಲೇಷಿಸಿ ಮಾತನಾಡಿದರಲ್ಲದೆ, ಗದುಗಿನಲ್ಲಿ ಕಿಡ್ನಿ ಕಸಿ ವೈದ್ಯಕೀಯ ಚಿಕಿತ್ಸೆಯು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಕಲ್ಪ ಆಸ್ಪತ್ರೆಯ ತಜ್ಞ ವೈದ್ಯರ ತಂಡದಿಂದ ಆರಂಭಗೊಳ್ಳಲಿದೆ. ಇದು ಗದಗ ಜಿಲ್ಲೆಯಲ್ಲಿಯೇ ಪ್ರಪ್ರಥಮ ಪ್ರಯತ್ನವಾಗಿದೆ ಎಂದರು.

ಡಾ.ನಮ್ರತಾ ಬಾಲರಡ್ಡಿ ಸ್ವಾಗತಿಸಿದರು. ಡಾ.ಮೇಘನಾ ಹಿಪ್ಪರಗಿ ನಿರೂಪಿಸಿದರು. ಕೊನೆಗೆ ಡಾ.ಮಹಾಲಕ್ಷ್ಮೀ ಕೋಳಿವಾಡ ವಂದಿಸಿದರು. ಕಾರ್ಯಕ್ರಮದಲ್ಲಿ ಡಾ.ದೀಪಕ ಕುರಹಟ್ಟಿ, ಡಾ.ಪವನ ಕೋಳಿವಾಡ, ಡಾ.ಶಿವಕುಮಾರ ಪವಾಡಶೆಟ್ಟರ, ಡಾ.ಶಿಲ್ಪಾ ಪವಾಡಶೆಟ್ಟರ ಮುಂತಾದವರಿದ್ದರು.

ಆರಂಭದಲ್ಲಿ ನರ್ಸಿಂಗ್ ಕಾಲೇಜ್ ವಿದ್ಯಾರ್ಥಿಗಳ ತಂಡದಿಂದ ಕಿಡ್ನಿ ಜಾಗೃತಿ ಮೂಡಿಸುವ ಅಣಕು ಪ್ರದರ್ಶನ ನಡೆಯಿತು. ನರ್ಸಿಂಗ್ ಕಾಲೇಜ್, ಸ್ಪರ್ಶಾ ಕಾಲೇಜ್, ಕೆ.ಎಚ್. ಪಾಟೀಲ ನರ್ಸಿಂಗ್ ಇನ್‌ಸ್ಟಿಟ್ಯೂಟ್‌ನ ವಿದ್ಯಾರ್ಥಿಗಳು, ಗಣ್ಯಮಾನ್ಯರು, ರೋಗಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗದಗ ಐಎಂಎ ಮಾಜಿ ಅಧ್ಯಕ್ಷ ಡಾ.ಪ್ಯಾರಅಲಿ ನೂರಾನಿ ಹಾಗೂ ಡಾ.ಶರಣ ಆಲೂರ ಮಾತನಾಡಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಂದು ಸಾಕಷ್ಟು ಅಭಿವೃದ್ಧಿ ಹೊಂದಿದೆ. ಕಿಡ್ನಿ ಕಸಿ ಮಾಡುವದು ಇತ್ತೀಚಿನ ದಿನಗಳಲ್ಲಿ ಇನ್ನಷ್ಟು ಸುಲಭಗೊಳಿಸಲಾಗಿದೆ ಎಂದರು.

# ಕಾಮರತಿ ಉತ್ಸವ ಸಮಿತಿಯ ಪದಾಧಿಕಾರಿಗಳ ಆಯ್ಕೆ


■ವಿಜಯಸಾಕ್ಷಿ ಸುದ್ದಿ, ಗದಗ

ಹಾಳದಿಬ್ಬ ವಿವಿದೋದ್ದೇಶಗಳ ಸೇವಾ ಸಂಸ್ಥೆಯ ವತಿಯಿಂದ 2024ನೇ ಸಾಲಿನ ಕಾಮರತಿ ಉತ್ಸವ ಸಮಿತಿ ಗೌರಾವಧ್ಯಕ್ಷರಾಗಿ ರುದ್ರಪ್ಪ ಕಲಬಂಡಿ, ಅಧ್ಯಕ್ಷರಾಗಿ ಅಶೋಕ ಮಂದಾಲಿ, ಉಪಾಧ್ಯಕ್ಷರಾಗಿ ಯಲ್ಲನಗೌಡ ದೇಸಾಯಿ, ಪ್ರಧಾನ ಕಾರ್ಯದರ್ಶಿಯಾಗಿ ಉಪೇಂದ್ರ ಹುಯಿಲಗೋಳ, ಕಾರ್ಯದರ್ಶಿಯಾಗಿ ವೀರೇಶ ಮೆಣಸಗಿ, ಖಜಾಂಚಿಯಾಗಿ ಕಿರಣ ಹಿರೇಮಠ, ಸಹ ಖಜಾಂಚಿಯಾಗಿ ರಾಕೇಶ ನವಲಗುಂದ ಆಯ್ಕೆಯಾಗಿದ್ದಾರೆ.

ಆನಂದ ಶಿದ್ಲಂಗ, ಲಕ್ಷ್ಮಣ ಭಾಂಡಿಗೆ, ಸದಾನಂದಸಿಂಗ್ ಗುರ್ಲಹೊಸೂರ, ಬಸವರಾಜ ಅರಗಂಜಿ, ಲಿಂಗನಗೌಡ ದೇಸಾಯಿ, ಸೋಮಯ್ಯಾ ದಂಡಿನಮಠ, ಸುನೀಲ ಸಂಕಣ್ಣವರ, ವಿನಾಯಕ ಹುಯಿಲಗೋಳ, ವಿನಾಯಕ ಕಪಲಿ ಪ್ರಚಾರ ಸಮಿತಿ ಸದಸ್ಯರನ್ನಾಗಿ ಹಾಗೂ ಸಲಹಾ ಸಮಿತಿಯಲ್ಲಿ ಈರಣ್ಣ ಖಾನಪ್ಪನವರ, ನಾರಾಯಣದಾಸ ಪುಣೇಕರ, ರಮೇಶ ಮಂದಾಲಿ, ಗಿರಿಯಪ್ಪ ಅಸೂಟಿ, ಶಿವಾಜಿ ಅರಸಿದ್ಧಿ, ವಾಸು ಹುಯಿಲಗೋಳ, ಗೋಪಾಲ ನಾಕೋಡ, ದೀಪಕ ನಾಕೋಡ ಮತ್ತು ಪರಶುರಾಮ ಆಲೂರರನ್ನು ಆಯ್ಕೆ ಮಾಡಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಕುಮಾರ ಮಂದಾಲಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿದ್ದಾರೆ.

# ಬಿಜೆಪಿಯಿಂದ ಜನಾಭಿಪ್ರಾಯ ಸಂಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ವತಿಯಿಂದ ವಿಕಸಿತ ಭಾರತ ಲೋಕಸಭಾ ಚುನಾವಣೆ-2024ರ ಪ್ರಣಾಳಿಕೆ, ಸಂಕಲ್ಪ ಪತ್ರ ಜನಾಭಿಪ್ರಾಯ ಸಂಗ್ರಹವು ನಗರದ ಪ್ರೋಬೋಸ್ ಕ್ಲಬ್‌ನಲ್ಲಿ ಎಲ್ಲ ಹಿರಿಯ ನಾಗರಿಕರಿಂದ ಸಲಹೆ ಸಂಗ್ರಹಿಸಲಾಯಿತು.

ಪ್ರಕೋಷ್ಠಗಳ ಜಿಲ್ಲಾ ಸಂಯೋಜಕ ಶಶಿಧರ ದಿಂಡೂರ ಮಾತನಾಡಿ, 2024ರ ಲೋಕಸಭೆ ಚುನಾವಣೆಯ ಪ್ರಣಾಳಿಕೆಗೆ ದೇಶದ ಪ್ರತಿಯೊಬ್ಬ ನಾಗರಿಕನ ಅಭಿಪ್ರಾಯ ಸಂಗ್ರಹ ಕಾರ್ಯ 'ಸಂಕಲ್ಪ ಪತ್ರ' ಅಭಿಯಾನದ ಮೂಲಕ ನಡೆಯುತ್ತಿದ್ದು, ತಮ್ಮ ಅಭಿಪ್ರಾಯಗಳನ್ನು ನಮೋ ಆ್ಯಪ್ ಮೂಲಕ ಅಥವಾ 9090902024 ಸಂಖ್ಯೆಗೆ ಮಿಸ್ ಕಾಲ್ ಮಾಡಿ ಸಲಹೆ ನೀಡಬಹುದು. ಸಂಗ್ರಹ ಪೆಟ್ಟಿಗೆಯಲ್ಲಿ ಬರೆದು ಅಭಿಪ್ರಾಯ ತಿಳಿಸಬಹುದು. 10 ವರ್ಷಗಳ ಕಾಲ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಜನ ಔಷದ, ಆಯುಷ್ಮಾನ್ ಭಾರತ, ಹರ್‌ಗರ್ ಸೌರ ವಿದ್ಯುತ್ ಹೀಗೆ ಅನೇಕ ಯೋಜನೆಗಳನ್ನು ಕೊಟ್ಟು ಭಾರತವನ್ನು ಸುಭದ್ರಗೊಳಿಸಿದ್ದಾರೆ ಎಂದರು.





ಜಿಲ್ಲಾ ಪ್ರಕೋಷ್ಠಗಳ ಸಹ ಸಂಯೋಜಕ ರಮೇಶ ಸಜ್ಜಗಾರ ಮಾತನಾಡಿ, ನರೇಂದ್ರ ಮೋದಿಯವರು ದೇಶದ ಪ್ರತಿಯೊಬ್ಬ ಪ್ರಜೆಯಿಂದ ಸರ್ಕಾರದ ಅಭಿವೃದ್ಧಿ ಕಾರ್ಯಗಳಿಗೆ ಸಲಹೆಗಳನ್ನು ಪಡೆಯುತ್ತಿದ್ದು, ಹಿಂದೆ ನೀಡಿದ ಎಲ್ಲ ಭರವಸೆಗಳನ್ನು ಈಡೇರಿಸುತ್ತಾ ಬಂದಿದ್ದಾರೆ. ಮಹಿಳೆಯರಿಗೆ ಉಚಿತ ಗ್ಯಾಸ್ ಸಂಪರ್ಕ, ದೇಶಾದ್ಯಂತ ರೈಲ್ವೆ ಮಾರ್ಗ ಸುಧಾರಣೆ, ಮೇಟ್ರೊ, ವಂದೇ ಭಾರತ್ ರೈಲು, ಆರ್ಟಿಕಲ್ 370 ರದ್ದತಿಗಳ ಮೂಲಕ ಭಾರತ ಮುನ್ನಡೆಯುತ್ತಿದ್ದು, ಸಬ್‌ಕಾ ಸಾತ್-ಸಬ್‌ಕಾ ವಿಕಾಸ್ ಎಂಬ ಪರಿಕಲ್ಪನೆಯೊಂದಿಗೆ ಮುನ್ನುಗ್ಗುತ್ತಿದೆ ಎಂದರು.


ಈ ಸಂದರ್ಭದಲ್ಲಿ ಹಿರಿಯರಾದ ಶಿವಪ್ಪ ಕೆ.ಕುರುಡಗಿ, ಪ್ರೋಬೋಸ್ ಕ್ಲಬ್ ಅಧ್ಯಕ್ಷ ತೆ-ಌಟಗೇರ, ಅಶೋಕ ಕೊಡಗಲಿ, ಬಿ.ಬಿ. ಗೌಡ್ರ, ಬಿ.ಎಂ. ಬಿಳೆಯಲಿ, ಆರ್.ಡಿ. ಕಪ್ಲಿ, ಸುರೇಕಾ ಪಿಳ್ಳಿ ಮುಂತಾದ ಹಿರಿಯರು ಉಪಸ್ಥಿತರಿದ್ದರು.

# 'ಚೈತ್ರದ ಚರಮಗೀತೆ' ಪುಸ್ತಕ ಲೋಕಾರ್ಪಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಹಾಗೂ ವಿಶಾಲ ಪ್ರಕಾಶನ ಕೊಪ್ಪಳ ಇವರ ಸಹಯೋಗದಲ್ಲಿ ಶಿಲ್ಪಾ ಮ್ಯಾಗೇರಿ ಅವರು ರಚಿಸಿದ 'ಚೈತ್ರದ ಚರಮಗೀತೆ' ಕವನ ಸಂಕಲನ ಲೋಕಾರ್ಪಣೆ ಸಮಾರಂಭ ಮಾ.16ರ ಸಂಜೆ 6 ಗಂಟೆಗೆ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಜರುಗಲಿದೆ.

ಕೃತಿ ಲೋಕಾರ್ಪಣೆಯನ್ನು ಕೊಪ್ಪಳದ ಸಾಹಿತಿಗಳಾದ ಡಿ. ರಾಮಣ್ಣ ನೆರವೇರಿಸುವರು. ಕೃತಿ ಪರಿಚಯವನ್ನು ಗಂಗಾವತಿಯ ವಿದ್ಯಾನಿಕೇತನ ಪ.ಪೂ





ಮಹಾವಿದ್ಯಾಲಯದ ಉಪನ್ಯಾಸಕ ಮಂಜುನಾಥ ಚಿತ್ರಗಾರ ಮಾಡುವರು. ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಮುಖ್ಯ ಅತಿಥಿಗಳಾಗಿ ಸಾವಿತ್ರಿ ಮುಜುಮದಾರ ಭಾಗವಹಿಸುವರು.

ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರು ಹಾಗೂ ಪ್ರಕಾಶಕರಾದ ಜಿ.ಎಸ್. ಗೋನಾಳ ಹಾಗೂ ಕೃತಿಯ ಲೇಖಕಿ ಶಿಲ್ಪಾ ಮ್ಯಾಗೇರಿ ಉಪಸ್ಥಿರಿರುವರು. ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಪರಿಷತ್ತಿನ ಆಜೀವ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಕೋಶಾಧ್ಯಕ್ಷ ಈರಣ್ಣ ಮಾದರ, ಸಹಕಾರ್ಯದರ್ಶಿಗಳಾದ ಡಾ. ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ತಾಲೂಕಾಸ್ಪತ್ರೆಗಳಲ್ಲೂ 'ಹೃದಯ ಜ್ಯೋತಿ'

▸▸ಮೊದಲನೇ ಪುಟದಿಂದ

ಇದೊಂದು ಮಹತ್ವದ ಯೋಜನೆಯಾಗಿದ್ದು, ಯಾವುದೇ ವ್ಯಕ್ತಿಗೆ ಹೃದಯಾಘಾತ ಸಂಭವಿಸಿದರೆ ತಕ್ಷಣ ರೂ.30 ಸಾವಿರ ಮೊತ್ತದ ಚುಚ್ಚುಮದ್ದು ಉಚಿತವಾಗಿ ನೀಡಲಾಗುತ್ತದೆ. ಬರುವ ವರ್ಷ ರಾಜ್ಯದ ಎಲ್ಲ ತಾಲೂಕು ಆಸ್ಪತ್ರೆಗಳಿಗೆ ಈ ಯೋಜನೆಯನ್ನು ವಿಸ್ತರಿಸಲಾಗುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕ ಎನ್. ಎಚ್. ಕೋನರಡ್ಡಿ, ಟ್ಯಾಕೋಡ್ ಸಂಸ್ಥೆಯ ಡಾ.ಚರಿತ ಮಾತನಾಡಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯದ ಆಯುಕ್ತ ಡಿ.ರಂದೀಪ್, ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು, ಎನ್.ಸಿ.ಡಿ ಜಂಟಿ ನಿರ್ದೇಶಕ ಹಾಗೂ ಇಲಾಖೆಯ ಅಪರ ನಿರ್ದೇಶಕರಾದ ಡಾ.ಉಮಾ ಬುಗ್ಗಿ, ಎನ್.ಸಿ.ಡಿ. ಉಪ ನಿರ್ದೇಶಕ ಡಾ. ಶ್ರೀನಿವಾಸ ಜಿ.ಎ., ಐಇಸಿ ಉಪನಿರ್ದೇಶಕ ಡಾ. ಧನಂಜಯ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಶಶಿ ಪಾಟೀಲ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಜಿಲ್ಲಾ ಸಮೀಕ್ಷಣಾಧಿಕಾರಿ ಪರಶುರಾಮ ಎಫ್.ಕೆ., ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ಸುಜಾತಾ ಹಸವಿಮಠ ಸೇರಿದಂತೆ ಇತರರು ಇದ್ದರು.

ಧಾರವಾಡ ತಾಲೂಕಾ ವೈದ್ಯಾಧಿಕಾರಿ ಡಾ. ಕೆ.ಎನ್. ತನುಜಾ ಅವರು ಸ್ವಾಗತಿಸಿ, ನಿರ್ವಹಿಸಿದರು. ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕ ಡಾ. ನವೀನ್ ಭಟ್ ವೈ ವಂದಿಸಿದರು.

# ಕಾನೂನು, ಪ್ರವಾಸೋದ್ಯಮ ಇಲಾಖೆ ಸಚಿವ ಡಾ.ಎಚ್.ಕೆ. ಪಾಟೀಲ ಜಿಲ್ಲಾ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಮಾರ್ಚ್ 16ರ ಗದಗ ಜಿಲ್ಲಾ ಪ್ರವಾಸದ ವಿವರ ಇಂತಿದೆ.

ಮಾರ್ಚ್ 16ರಂದು ಹುಬ್ಬಳ್ಳಿಯಿಂದ ರಸ್ತೆ ಮೂಲಕ ಬೆಳಿಗ್ಗೆ 7:30ಕ್ಕೆ ಗದಗ ಆಗಮಿಸುವರು. ನಂತರ ಬೆಳಿಗ್ಗೆ 10ಗಂಟೆಗೆ ಹುಲಕೋಟಿಯ ಶ್ರೀ ಸಾಯಿ ಸೇವಾ ಸಂಘ, ಸಾಯಿ ನಗರದಲ್ಲಿರುವ ಶ್ರೀ ಶಿರಡಿ ಸಾಯಿ ಮಂದಿರದ 5ನೇ ವಾರ್ಷಿಕೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 10.15ಗಂಟೆಗೆ ಹುಲಕೋಟಿ ಗ್ರಾಮದಲ್ಲಿ ಕೆ.ಸಿ.ಸಿ ಬ್ಯಾಂಕ್‌ನ ನೂತನ ಶಾಖೆ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 10.30 ಗಂಟೆಗೆ ಹುಲಕೋಟಿ ನೂತನ ಬಸ್ ನಿಲ್ದಾಣದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು.



ಬೆಳಿಗ್ಗೆ 10:45 ಗಂಟೆಗೆ ಬಿಂಕದಕಟ್ಟಿಯ ಶ್ರೀ ರಾಮಕರುಣಾನಂದ ಮಹಾದ್ವಾರ ಉದ್ಘಾಟನೆ ಮತ್ತು ಮೇವಿನ ಬ್ಯಾಂಕ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11ಗಂಟೆಗೆ ಅಸುಂಡಿ ಗ್ರಾಮದ ಸರಕಾರಿ ಹೋಮಿಯೋಪತಿ ಚಿಕಿತ್ಸಾಲಯ ಯೋಗ ಕೊಠಡಿ ಹಾಗೂ ಪಂಚಕರ್ಮ ಕೊಠಡಿ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 11.30ಗಂಟೆಗೆ ಗದಗದಲ್ಲಿರುವ ಕೂಗು ಬಿಲ್ಡಿಂಗ್, ಲೇಮನ್ ಹೋಟೆಲ್ ಎದುರಿಗೆ, ಸೌಭಾಗ್ಯ ಮಹಿಳಾ ಸೌಹಾರ್ದ ಸಹಕಾರಿ ಬ್ಯಾಂಕ್ ನಿಯಮಿತಿ ಗದಗ ಇದರ ನೂತನ ಶಾಖೆ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 12.30 ಗಂಟೆಗೆ ಗದಗದಲ್ಲಿರುವ ಎಸ್.ಎಂ.ಕೆ ನಗರ, ವಾರ್ಡ್ ನಂ.1. ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.12ರಲ್ಲಿ ಗೌರವ ಘಟಕ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 3 ಗಂಟೆಗೆ ಹುಲಕೋಟಿಯ ಮಾರುತಿ ದೇವಸ್ಥಾನ ಹತ್ತಿರದಲ್ಲಿ ನಿರ್ಮಿಸುತ್ತಿರುವ ಸಮುದಾಯ ಭವನದ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 3.30 ಗಂಟೆಗೆ ದಿ ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ದಿ.ಗದಗ ಕೋ-ಆಪ್ ಕಾಟನ್ ಸೇಲ್ ಸೊಸೈಟಿಯ ಕಟ್ಟಡ ಸಂಕೀರ್ಣದ ಭೂಮಿ ಪೂಜೆ ಕಾರ್ಯಕ್ರಮ ಪಾಲ್ಗೊಳ್ಳುವರು.

ಸಾಂಯಕಾಲ 4 ಗಂಟೆಗೆ ಹುಲಕೋಟೆಯ ಕೆ.ಎಚ್.ಪಾಟೀಲ ವಿದ್ಯಾಮಂದಿರ ಪ್ರಾಂಗಣದಲ್ಲಿ ಕೆ.ಎಚ್.ಪಾಟೀಲರ ಜನ್ಮ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗದಲ್ಲಿ ವಾಸ್ತವ್ಯ ಮಾಡುವರು ಎಂದು ಸಚಿವರ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಮಕ್ಕಳ ಮೇಲೆ ಹುಚ್ಚು ನಾಯಿ ದಾಳಿ । ಹತ್ತಾರು ಮಕ್ಕಳಿಗೆ ಗಾಯ । ಕಿಮ್ಸ್, ಜಿಮ್ಸ್ ಆಸ್ಪತ್ರೆಗೆ ದಾಖಲು

# ಬೀದಿ ನಾಯಿಗಳ ಹಾವಳಿಗೆ ಬೆಚ್ಚಿದ ಪಾಲಕರು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಗುರುವಾರ ರಾತ್ರಿ ಏಕಾಏಕಿ ಹುಚ್ಚು ನಾಯಿಯ ದಾಳಿಯಿಂದ ಹತ್ತಾರು ಮಕ್ಕಳು ಗಾಯಗೊಂಡಿದ್ದು, ಪಾಲಕರು ಬೆಚ್ಚಿ ಬಿದ್ದಿದ್ದಾರೆ. ನಾಯಿಯ ದಾಳಿಯಿಂದ ತೀವ್ರವಾಗಿ ಗಾಯಗೊಂಡ ಮಕ್ಕಳನ್ನು ಹುಬ್ಬಳ್ಳಿಯ ಕಿಮ್ಸ್ ಮತ್ತು ಜಿಮ್ಸ್‌ಗೆ ದಾಖಲಿಸಿ, ರಾತ್ರೋರಾತ್ರಿ ಚಿಕಿತ್ಸೆ ಕೊಡಿಸಿದ್ದಾರೆ. ಈ ಘಟನೆಯಿಂದ ಮಕ್ಕಳು ಮತ್ತು ಪಾಲಕರು ಭೀತಿಗೊಳಗಾಗಿದ್ದಾರೆ.

ಗುರುವಾರ ರಾತ್ರಿ 9 ಗಂಟೆ ಹೊತ್ತಿಗೆ ಪಟ್ಟಣದ ಪಾದಗಟ್ಟಿ, ಪೇಟಬಣ, ಬಸಾಪುರ ಓಣಿ, ಸೊಪ್ಪಿನಕೇರಿ ಓಣಿಯ ಹಲವು ಕಡೆ ಮಕ್ಕಳ ಮೇಲೆ ಎಗರಿದ ಹುಚ್ಚುನಾಯಿಯೊಂದು ಮಕ್ಕಳಿಗೆ ಎಲ್ಲೆಂದರಲ್ಲಿ ಕಚ್ಚಿ ಗಾಯಗೊಳಿಸಿದೆ. ಬಸಾಪುರ ಓಣಿಯ ಶಿವರಾಜ ಬಳಗಾನೂರ(9) ಈತನ ಬಾಯಿ, ತುಟಿಗೆ ಕಚ್ಚಿದ್ದು ಹೆಚ್ಚಿನ ಚಿಕಿತ್ಸೆಗೆ ಹುಬ್ಬಳ್ಳಿ ಕಿಮ್ಸ್‌ಗೆ ದಾಖಲಿಸಲಾಗಿದೆ. ಗೊಲ್ಲಾಳೇಶ್ವರ ದೇವಸ್ಥಾನ



ಹತ್ತಿರದ ಆದ್ಯಾ ಪಾಟೀಲ(2) ಎಂಬ ಬಾಲಕಿಯ ಕಿವಿಗೆ ಕಚ್ಚಿದೆ. ಅದೇ ರೀತಿ ಪಟ್ಟಣದ ಅನೇಕರ ಕುತ್ತಿಗೆ, ಕೈ, ಕಿವಿ, ಕಾಲಿಗೆ ಕಚ್ಚಿದೆ.





ಹಳ್ಳದಕೇರಿ ಓಣಿಯಲ್ಲಿ ಕರುವಿಗೆ, ಹಳೇ ಬಸ್ ನಿಲ್ದಾಣದಲ್ಲಿ ನಾಯಿಗೆ ಕಚ್ಚಿ ಗಾಯಗೊಳಿಸಿದೆ. ಈ ಸುದ್ದಿ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ್ದರಿಂದ ಜನತೆ ಬೆಚ್ಚಿಬಿದ್ದಿದ್ದಾರೆ.

ಪಟ್ಟಣದಲ್ಲಿ ಬೀದಿ ನಾಯಿಗಳ ಸಂಖ್ಯೆ ವಿಪರೀತವಾಗಿದ್ದು, ಮಕ್ಕಳನ್ನು ಶಾಲೆಗೆ ಕಳುಹಿಲಸು, ಆಟವಾಡಲು ಹೊರಗಡೆ ಬಿಡದಂತಹ ಭಯದ ವಾತಾವರಣ ನಿರ್ಮಾಣವಾಗಿದೆ. ನಾಯಿಗಳ ಸಂತತಿ ಹೆಚ್ಚಲು ಪೂರಕವಾದ ಎಲ್ಲ ರೀತಿಯ ವಾತಾವರಣ ಪಟ್ಟಣದಲ್ಲಿದೆ. ಈ ಬಗ್ಗೆ ಹಲವಾರು ವರ್ಷಗಳಿಂದ ಸಾರ್ವಜನಿಕರ ದೂರು, ಪತ್ರಿಕೆಗಳ ವರದಿಗೂ ಪುರಸಭೆಯವರು ಕ್ಯಾರೇ ಎನ್ನುತ್ತಿಲ್ಲ. ರಾಕ್ಷಸ ಸ್ವರೂಪದ ನಾಯಿಗಳ ಹಿಂಡಿನ ವರ್ತನೆಗೆ ನಿತ್ಯ ಒಂದಿಲ್ಲೊಂದು ಕಡೆ ತೊಂದರೆ ಆಗುತ್ತಲೇ ಇದೆ. ಸಾರ್ವಜನಿಕರು ಬಡಿಗೆ, ಕಲ್ಲು ಹಿಡಿದುಕೊಂಡು ಓಡಾಡುವಂತಾಗಿದೆ. ಹುಚ್ಚುನಾಯಿ ಕಡಿತಕ್ಕೆ ದೊಡ್ಡ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಚುಚ್ಚುಮದ್ದು ಲಭ್ಯವಿಲ್ಲದ ಕಾರಣ, ಗದಗ, ಹುಬ್ಬಳ್ಳಿಗೆ ಅಲೆಯುವಂತಾಗಿದೆ.

**– ಮಲ್ಲನಗೌಡ ಪಾಟೀಲ.**
ನಾಯಿ ಕಡಿತಕ್ಕೊಳಗಾದ ಬಾಲಕಿಯ ತಂದೆ.

ಹುಚ್ಚಿನಾಯಿ ಕಡಿತದ ಮಾಹಿತಿ ತಿಳಿಯುತ್ತಿದ್ದಂತೆಯೇ ಪೌರ ಕಾರ್ಮಿಕರು, ಸಾರ್ವಜನಿಕರೊಡಗೂಡಿ ತಡರಾತ್ರಿವರೆಗೂ ನಾಯಿ ಹುಡುಕಾಡಲಾಗಿದೆ. ಆದರೆ ಆ ನಾಯಿ ಬೆಳಿಗ್ಗೆ ಆಸಾರ ರಸ್ತೆಯಲ್ಲಿ ಸತ್ತು ಬಿದ್ದಿತ್ತು. ಇದನ್ನು ಹೂಳಲಾಗಿದೆ. ಬೀದಿನಾಯಿಗಳ ನಿಯಂತ್ರಣಕ್ಕಾಗಿ ಕ್ರಮ ಕೈಗೊಳ್ಳಲು ಮಾಡಿರುವ ಪ್ರಯತ್ನಗಳಿಗೆ ಆರ್ಥಿಕ ಹೊರೆ ಮತ್ತು ಸಾಕಷ್ಟು ತೊಂದರೆಗಳು ಉಂಟಾಗಿವೆ. ಈ ಬಗ್ಗೆ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು.

**– ಮಂಜುನಾಥ ಮುದಗಲ್.**
ಆರೋಗ್ಯ ನಿರೀಕ್ಷಕರು.

### ಮಕ್ಕಳ ರಕ್ತ ಗುಂಪು ತಪಾಸಣೆ ಕಾರ್ಯಕ್ರಮದಲ್ಲಿ ಎಸ್.ಆರ್. ಬಂಡಿ ಅಭಿಮತ

# ರೋಟರಿ ಸಂಸ್ಥೆಯ ಕಾರ್ಯ ಶ್ಲಾಘನೀಯ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪೋಲಿಯೊ ನಿರ್ಮೂಲನೆ ಮಾಡುವಲ್ಲಿ ಮಹತ್ವದ ಪಾತ್ರ ವಹಿಸಿದ್ದ ರೋಟರಿ ಸಂಸ್ಥೆ ಇದೀಗ ಶೈಕ್ಷಣಿಕ, ಸಾಮಾಜಿಕ ಕ್ಷೇತ್ರದತ್ತ ತನ್ನ ಕಾರ್ಯ ವಿಸ್ತರಿಸಿರುವುದು ಶ್ಲಾಘನೀಯ ಎಂದು ಗದಗ ಶಿಕ್ಷಕರ ಸಂಘದ ಅಧ್ಯಕ್ಷ ಎಸ್. ಆರ್. ಬಂಡಿ ಹೇಳಿದರು.




ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಗದಗ ರೋಟರಿ ಸಂಸ್ಥೆ ಹಾಗೂ ಬಸವೇಶ್ವರ ಬ್ಲಡ್ ಬ್ಯಾಂಕ್ ಸಹಯೋಗದಿಂದ ಮಕ್ಕಳ ರಕ್ತ ಗುಂಪು ತಪಾಸಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರೋಟರಿ ಸಂಸ್ಥೆ ಅಂಧರ ಬಾಳಿಗೆ ಬೆಳಕಾಗಿ, ಮಕ್ಕಳ ಶೈಕ್ಷಣಿಕ ಪ್ರಗತಿಗೆ, ಸಾಮಾಜಿಕ ಸೇವೆ, ದುರ್ಬಲ ಹಾಗೂ ಬಡವರ ಏಳಿಗೆಗೆ ಸಾರ್ವಜನಿಕರ ಶ್ರೇಯೋಭಿವೃದ್ಧಿಗೆ, ಗುಣ ಮಟ್ಟದ ಶಿಕ್ಷಣ, ವೈದ್ಯಕೀಯ ಮತ್ತು ಸರಕಾರಿ ಶಾಲಾ ಮಕ್ಕಳ ರಕ್ತದ ಗುಂಪು ತಪಾಸಣೆ ಸಲ್ಲಿಸುತ್ತಿರುವುದು ಶ್ಲಾಘನೀಯವಾದ ಕಾರ್ಯ ಎಂದರು.

ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1 ಹಾಗೂ ಸರಕಾರಿ ಪ್ರೌಢಶಾಲೆಯ 550 ಮಕ್ಕಳ ರಕ್ತ ಗುಂಪು ತಪಾಸಣೆ ಮಾಡಲಾಯಿತು. ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ರೋಟರಿ ಸಂಸ್ಥೆಯ ಖಜಾಂಚಿ ಬಿ.ಪಿ. ಕಾಮತ್, ಮಾಹಾಂತೇಶ ಬಾತಾಖಾನಿ, ಎಸ್.ಎಸ್. ಹೊಸಳ್ಳಿಮಠ, ಬಸವೇಶ್ವರ ಬ್ಲಡ್ ಬ್ಯಾಂಕ್ ನಿರ್ದೇಶಕ ಅನಿಲಕುಮಾರ ಇಂಗಳಹಳ್ಳಿ, ಕೆ.ಬಿ. ಕೊಣ್ಣೂರ, ಶಂಕರ ಹಡಗಲಿ, ಸಿಆರ್‌ಪಿ ಎಂ.ಎಂ. ನಿಂಬನಾಯ್ಕರ್, ಎಸ್.ಜಿ. ಚವಡಿ, ಐ.ಎಂ. ಗಾಡಗೋಳಿ, ಮೋಹನ ಮೆಣಸಿನಕಾಯಿ, ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ ಇದ್ದರು.

# ಸಾಧಕರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ರಾಜೇಶ್ವರಿ ಕಲಾ ಕುಟೀರದ 23ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ ಸಂಗೀತ ನೃತ್ಯೋಲ್ಲಾಸ ಕಾರ್ಯಕ್ರಮದಲ್ಲಿ ಸಾಹಿತಿ ವಾಸುಸೇವ ಹೂಲಿ, ಜಾನಪದ ಕಲಾವಿದೆ ಸಾವಿತ್ರಿ ಮಹಾಂತೇಶ ಲಮಾಣಿ ಮತ್ತು ತಬಲಾ ಕಲಾವಿದ ನಾಗಲಿಂಗ ಮುರಗಿಯವರನ್ನು ಸನ್ಮಾನಿಸಲಾಯಿತು.

ತ್ರಿವಿಧ ದಾಸೋಹಿ ಪೂಜ್ಯ ಶ್ರೀಮನ್ನಿರಂಜನ ಜಗದ್ಗುರು ಡಾ. ತೆ-ೂಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಮಾಜಿ ಸಚಿವ ಎಸ್.ಎಸ್. ಪಾಟೀಲ, ಡಾ. ಜಿ.ಬಿ. ಪಾಟೀಲ ಉಪಸ್ಥಿತರಿದ್ದರು.

### ಮಹೇಶ್ವರಿ ವಿವಿದೋದ್ದೇಶಗಳ ಮಹಿಳಾ ಮಂಡಳದಿಂದ ಮಹಿಳಾ ದಿನಾಚರಣೆ

# ಸ್ತ್ರೀಯರು ಶಕ್ತಿಯ ಅವತಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯ ಚಿತ್ರಣವೇ ಅಪೂರ್ವ ಹಾಗೂ ಅನನ್ಯ. ಶಕ್ತಿಯ ಎಲ್ಲ ಆಯಾಮಗಳನ್ನು ಸ್ತ್ರೀ ತತ್ವದ ನೆಲೆಯಲ್ಲಿಯೇ ಕಂಡುಕೊಳ್ಳಲಾಗಿದ್ದು, ಸ್ತ್ರೀಯರು ಶಕ್ತಿಯ ಅವತಾರವೆಂದು ಜನನಿತವಾಗಿದೆ ಎಂದು ಕರ್ನಾಟಕ ಲೇಖಕಿಯರ ಸಂಘದ ಗದಗ ಜಿಲ್ಲಾಧ್ಯಕ್ಷೆ ಕವಿತಾ ದಂಡಿನ ಅಭಿಪ್ರಾಯಪಟ್ಟರು.



ಅವರು ಬುಧವಾರ ಗದುಗಿನ ಮಹೇಶ್ವರಿ ವಿವಿದೋದ್ದೇಶಗಳ ಮಹಿಳಾ ಮಂಡಳದಿಂದ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಸಾಧಕಿಯರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರ ಕೌಶಲ್ಯಾಭಿವೃದ್ಧಿಗೆ ಉತ್ತೇಜನ ನೀಡುವ, ಸ್ಫೂರ್ತಿ ತುಂಬುವ ಹಾಗೂ ಅವರ ಅಂತರಂಗದ ಕಲಾತ್ಮಕತೆಗೆ ಸಾಂಸ್ಕೃತಿಕ ತುಡಿತಕ್ಕೆ, ನವಿರಾದ ಭಾವಕ್ಕೆ ಮಾತ್ರವಲ್ಲದೆ ಅವಳಲ್ಲಿಯ ಹೆಪ್ಪುಗಟ್ಟಿದ ದುಃಖ-ದುಮ್ಮಾನ ಭಾವನೆಗಳ ನೋವು ನಲಿವುಗಳಿಗೆ, ಅವಳಲ್ಲಿ ಅಡಗಿರುವ ಸೂಕ್ತ ಪ್ರತಿಭೆಯ ಅನಾವರಣಕ್ಕೆ ಅವಕಾಶಗಳನ್ನು ಒದಗಿಸಿಕೊಡಬೇಕು. ಇಂತಹ ತರಬೇತಿ ಕೇಂದ್ರಗಳು ಸ್ತ್ರೀಯರ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡುತ್ತವೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕೃಷಿ ಸಾಧಕ ಮಹಿಳೆ ಮಂಗಳಾ ನೀಲಗುಂದ, ನಮ್ಮ ಜನ ಮಣ್ಣನ್ನು ನಂಬಿ ಬದುಕಿದವರು. ಉತ್ತಿ ಬಿತ್ತಿ ಎತ್ತುಗಳ ಒಡನಾಟದಲ್ಲಿ ಬದುಕು ಕಟ್ಟಿಕೊಂಡ ರೈತಾಪಿ ಮಹಿಳೆಯರು ಆಧುನಿಕತೆಯೊಂದಿಗೆ ಹೊಂದಿಕೊಂಡು ಕೃಷಿಯನ್ನು ಮಾಡುತ್ತ ಲಾಭವನ್ನು ಗಳಿಸಬೇಕೆಂದರು.

ವೇದಿಕೆಯ ಮೇಲೆ ರೇಖಾ ಖಟವಟೆ, ಸರೋಜಾ ಟಿಕಾಂನದಾರ, ಫಕ್ಕೀರಮ್ಮ ಲಕ್ಕುಂಡಿ ಉಪಸ್ಥಿತರಿದ್ದರು. ಪುಷ್ಪಾ ಮುನವಳ್ಳಿ ಹಾಗೂ ಲಲಿತಾ ಸಂಗನಾಳ ಪ್ರಾರ್ಥಿಸಿದರು. ವೀಣಾ ಬೈಲಿ ನಿರೂಪಿಸಿದರು. ರೇಣುಕಾ ಹಂದ್ರಾಳ, ರೇಖಾ ಶಿಗ್ಲಿಮಠ ಪರಿಚಯಿಸಿದರು. ಉಷಾ ನಾಲ್ವಾಡ ಸ್ವಾಗತಿಸಿದರು. ಮಂಜುಳಾ ಮಲ್ಲಾಪೂರ ವಂದಿಸಿದರು.


ಮಹಿಳೆಯರಿಗಾಗಿ ಏರ್ಪಡಿಸಿದ್ದ ರಸಪ್ರಶ್ನೆ ಕಾರ್ಯಕ್ರಮವನ್ನು ರಶ್ಮಿಕಾ ಹಿರೇಮಠ ನಡೆಸಿ, ವಿಜೇತರುಗಳಿಗೆ ಬಹುಮಾನ ವಿತರಿಸಿದರು. ಕಾರ್ಯಕ್ರಮದಲ್ಲಿ ಸುಹಾಸಿನಿ ಪಾಟೀಲ, ನಿರ್ಮಲಾ ನಾಯಕ, ಲಕ್ಷ್ಮೀ ಕಲಬುರ್ಗಿ, ವಿದ್ಯಾ ಹಿರೇಗೌಡರ, ಅನುಪಮಾ ಕಾರಜೋಳ, ವಿದ್ಯಾ ಇಂಗಳಳ್ಳಿ, ತಸ್ಲಿಂ ಮುಂತಾದವರಿದ್ದರು.

ಸನ್ಮಾನಿತರಾದ ಪಾರ್ವತಿ ಶಾಬಾದಿಮಠ ಮಾತನಾಡಿ, ಮಹಿಳೆಯರು ಇತ್ತೀಚೆಗೆ ಸ್ವಾವಲಂಬನೆಯ ಬದುಕು ನಡೆಸಲು ಶ್ರಮಿಸುತ್ತಿದ್ದು, ತರಬೇತಿಗಳನ್ನು ಪಡೆದು ಯಶಸ್ವಿಯಾಗಬೇಕೆಂದರು. ಅಧ್ಯಕ್ಷತೆ ವಹಿಸಿದ್ದ ಮಹೇಶ್ವರಿ ವಿವಿದೋದ್ದೇಶಗಳ ಮಹಿಳಾ ಮಂಡಳದ ಅಧ್ಯಕ್ಷೆ ಜಯಶ್ರೀ ಹಿರೇಮಠ ಮಾತನಾಡಿ, ಮಹಿಳೆಯರು ಒಂದಿಲ್ಲ ಒಂದು ಕಲೆಯಲ್ಲಿ ಪರಿಣಿತಿ ಪಡೆದಿರುತ್ತಾರೆ. ಅದನ್ನೇ ನಾವು ತರಬೇತಿ ಪಡೆದಾಗ, ಯಶಸ್ವಿಯಾಗಿ ಕಾರ್ಯಚಟುವಟಿಕೆಗಳಲ್ಲಿ ತೊಡಗಿದಾಗ ಸ್ವಾವಲಂಬಿಗಳಾಗುತ್ತೇವೆ ಎಂದರು.

# 'ಕಲಾ ವಿಕಾಸ ಉತ್ಸವ'ದ ಸ್ವಾಗತ ಸಮಿತಿ ಅಧ್ಯಕ್ಷರಾಗಿ ವಿ.ಕೆ. ಗುರುಮಠ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕ ಕಲಾವಿದರ ಹಾಗೂ ಕಲಾಪೋಷಕರ ಸಂಘಟನೆಯಾದ ಗದುಗಿನ ಕಲಾ ವಿಕಾಸ ಪರಿಷತ್ತಿನ, ರಾಷ್ಟ್ರೀಯ ಮಟ್ಟದ ಕಲಾ ವಿಕಾಸ ಉತ್ಸವ-2024 ಸಮಾರಂಭದ ಸ್ವಾಗತ ಸಮಿತಿಯ ಅಧ್ಯಕ್ಷರಾಗಿ ನಗರದ ಪ್ರಥಮ ದರ್ಜೆ ಗುತ್ತಿಗೆದಾರ, ಸಮಾಜ ಸೇವಕರಾದ ವಿ.ಕೆ. ಗುರುಮಠ ಇವರನ್ನು ಪರಿಷತ್‌ನ ಗೃಹ ಕಚೇರಿಯಲ್ಲಿ ನಡೆದ ಕಾರ್ಯಕಾರಣಿ ಸಮಿತಿಯ ಸಭೆಯಲ್ಲಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು ಎಂದು ಪರಿಷತ್ ಸಂಸ್ಥಾಪಕ ಸಿ.ಕೆ.ಹೆಚ್ ಶಾಸ್ತ್ರೀ (ಕಡಣಿ) ತಿಳಿಸಿದ್ದಾರೆ.



ಈ ಹಿಂದಿನ ಉತ್ಸವಗಳಲ್ಲಿ ವಿಶ್ವನಾಥ್ ರಾಮನಕೊಪ್ಪ, ಡಾ. ಜಿ.ಬಿ. ಪಾಟೀಲ್, ವಿಜಯ್ ಕುಮಾರ್ ಗಡ್ಡಿ, ಎಚ್.ಎಸ್. ಶಿವನಗೌಡರ್, ಸಿರಾಜ್ ಬಳ್ಳಾರಿ, ಮಂಜುನಾಥ್ ರೆಡ್ಡಿ, ಡಾ. ಶೇಖರ ಸಜ್ಜನರ್ ಮೊದಲಾದ ಚಿಂತಕರು ಸ್ವಾಗತ ಸಮಿತಿಯ ಅಧ್ಯಕ್ಷರಾಗಿ ಕಲಾವಿಕಾಸ ಪರಿಷತ್ತಿನ ಕಾರ್ಯಕ್ರಮಗಳನ್ನು ಪ್ರೋತ್ಸಾಹಿಸಿದ್ದಾರೆ ಎಂದು ಸಭೆಯಲ್ಲಿ ಶಾಸ್ತ್ರೀಗಳು ನೆನಪಿಸಿಕೊಂಡರು. ಏಪ್ರಿಲ್ ತಿಂಗಳ ಕೊನೆಯ ವಾರದಲ್ಲಿ ಅಥವಾ ಮೇ ಮೊದಲ ವಾರದಲ್ಲಿ ಹಮ್ಮಿಕೊಳ್ಳುವ ಎರಡು ದಿನದ ಉತ್ಸವಕ್ಕೆ ಸ್ಥಳೀಯ ಸಾಂಸ್ಕೃತಿಕ ಸಂಘಟನೆಗಳ ಮತ್ತು ಸಂಗೀತ-ನೃತ್ಯ ಕಲಾಪ್ರಿಯರ ಸಹಕಾರ ಪಡೆಯಲಾಗುವುದು ಎಂದರು. ಮುಂದಿನ ದಿನಗಳಲ್ಲಿ ವಿ.ಕೆ. ಗುರುಮಠ ಅವರ ಅಧ್ಯಕ್ಷತೆಯಲ್ಲಿ ಸಂಘ-ಸಂಸ್ಥೆಗಳ ಸಭೆ ಕರೆದು, ಪೂರ್ಣ ಪ್ರಮಾಣದ ಸ್ವಾಗತ ಸಮಿತಿ ರಚಿಸಲಾಗುವುದು

ಕಲಾ ವಿಕಾಸ ಪರಿಷತ್ತು ಶುದ್ಧ ಶಾಸ್ತ್ರೀಯ ಸಂಗೀತಕ್ಕಾಗಿ ಸ'ವ'ಂಪ್ರಿ ಸಿಕ'ೂಂಡ' ಸಂಸ್ಥೆಯಾಗಿದ್ದು, ಈ ಸಂಸ್ಥೆಯು ಅವಳಿ ನಗರದಲ್ಲಿ ಮಾತ್ರವಲ್ಲದೆ ದೇಶದ ಅನೇಕ ರಾಜ್ಯಗಳಲ್ಲಿ ಬಾಲ, ಯುವ ಮತ್ತು ಹಿರಿಯ ಕಲಾವಿದರಿಗಾಗಿ ಸಂಗೀತ ನೃತ್ಯ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ದೇಶದ ಕಲಾ ದಿಗ್ಗಜರ ಚಿರಪರಿಚಿತ ಸಂಸ್ಥೆಯಾಗಿದೆ.

ಎಂದು ಹೇಳಿದರು.

ಪರಿಷತ್‌ನ ಹಿತೈಷಿ, 'ವಿಭೂತಿ' ಮಾಸ ಪತ್ರಿಕೆಯ ಸಂಪಾದಕ, ಸಾಹಿತಿ ಅಂದಾನೆಪ್ಪ ವಿಭೂತಿ, ನಿವೃತ್ತ ಚಿತ್ರಕಲಾ ಶಿಕ್ಷಕ, ಖ್ಯಾತ ಕಲಾವಿದ ಶಿವಪ್ಪ ಬೆನಕಣ್ಣವರ, ರುದ್ರೇಶ ಕೊರವರ್, ಪ್ರದೀಪ ನೆರ್ತಿ, ಎಫ್.ಎ. ಹಿರೇಮಠ ಮತ್ತು ಸರ್ವ ಸದಸ್ಯರು ಉಪಸ್ಥಿತರಿದ್ದು ತಮ್ಮ ಅನಿಸಿಕೆ-ಅಭಿಪ್ರಾಯಗಳನ್ನು ಹಂಚಿಕೊಂಡರು.

# ರಾಷ್ಟ್ರಮಟ್ಟದ ನಿರ್ಣಾಯಕರಾಗಿ ವೈ.ಕೆ. ಚೌಡಾಪುರ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾರ್ಚ್ 19ರಿಂದ 23ರವರೆಗೆ ನಾಗಾಲ್ಯಾಂಡ್‌ನಲ್ಲಿ ನಡೆಯಲಿರುವ ಪುರುಷರ ರಾಷ್ಟ್ರಮಟ್ಟದ ವಾಲಿಬಾಲ್ ಪಂದ್ಯಾಟದಲ್ಲಿ ಗದಗ ಜಿಲ್ಲೆಯ ರಾಷ್ಟ್ರಮಟ್ಟದ ನಿರ್ಣಾಯಕರಾದ ವೈ.ಕೆ. ಚೌಡಾಪುರ್ ನಿರ್ಣಾಯಕರಾಗಿ ಕಾರ್ಯನಿರ್ವಹಿಸಲು ನಾಗಾ ಲ್ಯಾಂಡ್‌ಗೆ ತೆರಳಲಿದ್ದಾರೆ.



ಇವರಿಗೆ ಗದಗ ಜಿಲ್ಲೆಯ ಎಲ್ಲ ವಾಲಿಬಾಲ್ ಕ್ರೀಡಾಪಟುಗಳು, ಜಿಲ್ಲಾ ವಾಲಿಬಾಲ್ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರಮೇಶ್. ಕೆ. ಅಬ್ಬಿಗೇರಿ, ಲಕ್ಷ್ಮೀಕಾಂತ್ ಖಟವಟೆ, ಟೀಚರ್ಸ್ ಅಂಡ್ ಫ್ರೆಂಡ್ಸ್ ಸ್ಪೋರ್ಟ್ಸ್ ಕ್ಲಬ್‌ನ ಪದಾಧಿಕಾರಿಗಳು, ಗದಗ ಜಿಲ್ಲಾ ಸರ್ಕಾರಿ ನೌಕರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಕರ್ನಾಟಕ ರಾಜ್ಯ ವಾಲಿಬಾಲ್ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ. ನಂದಕುಮಾರ್, ಕೆ. ವೆಂಕಟೇಶ್, ಜಿಲ್ಲೆಯ ಎಲ್ಲ ದೈಹಿಕ ಶಿಕ್ಷಣ ಶಿಕ್ಷಕರು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳು, ಸಂಬಾಪುರ್ ಗ್ರಾಮದ ಗುರು-ಹಿರಿಯರು, ಕ್ರೀಡಾಪಟುಗಳು ಅಭಿನಂದಿಸಿದ್ದಾರೆ.

# ಡಾ. ಪಂಡಿತ ಪುಟ್ಟರಾಜ ರೈತ ಸಂಘದ ಪದಾಧಿಕಾರಿಗಳ ನೇಮಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ನಿರೀಕ್ಷಣಾ ಮಂದಿರದಲ್ಲಿ ಶ್ರೀ ಡಾ. ಪಂಡಿತ ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳುಗುಂದ ನೇತೃತ್ವದಲ್ಲಿ ರೈತ ಸಂಘಕ್ಕೆ ಪದಾಧಿಕಾರಿಗಳನ್ನು ನೇಮಿಸಿ ಆದೇಶ ಪ್ರತಿಯನ್ನು ನೀಡಲಾಯಿತು.



ಕರ್ನಾಟಕ ರಾಜ್ಯ ಶ್ರೀ ಡಾ. ಪಂಡಿತ ಪುಟ್ಟರಾಜ ರೈತ ಸಂಘದ ಮಹಿಳಾ ಘಟಕದ ರಾಜ್ಯ ಉಪಾಧ್ಯಕ್ಷರಾಗಿ ಲಲಿತಾ ಗುಳುಗುಳುಕಿ ಹಾಗೂ ಮಹಿಳಾ ಘಟಕ ರಾಜ್ಯ ಕಾರ್ಯದರ್ಶಿಯಾಗಿ ಜಯಶ್ರೀ ವಡ್ಡರ, ಗದಗ ಮಹಿಳಾ ಘಟಕದ ತಾಲೂಕ ಅಧ್ಯಕ್ಷರಾಗಿ ಶಂಶಾದಬೇಗಂ ಶಲವಡಿ, ಗದಗ ತಾಲೂಕ ಉಪಾಧ್ಯಕ್ಷರಾಗಿ ರೇಣುಕಾ ಕುರಿ, ಹೊಸೂರು ಗ್ರಾಮ ಘಟಕದ ಅಧ್ಯಕ್ಷರಾಗಿ ರಮೇಶ ಬಂಡಿವಡ್ಡರ ಇವರಿಗೆ ನೇಮಕಾತಿ ಆದೇಶ ಪ್ರತಿಯನ್ನು ನೀಡಲಾಯಿತು.

ಸಂಘದ ಗೌರವಾಧ್ಯಕ್ಷರಾಗಿ ಪರಮಪೂಜ್ಯ ಬಸವರಾಜ ಶರಣರು ಅಬ್ಬಿಗೇರಿ ಅಧಿಕಾರ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ರಾಜ್ಯ ರೈತ ಘಟಕದ ಪ್ರಧಾನ ಕಾರ್ಯದರ್ಶಿ ಅಣ್ಣಪ್ಪಗೌಡ ದೇಸಾಯಿ, ಅಲ್ಪಸಂಖ್ಯಾತರ ಘಟಕದ ಉಪಾಧ್ಯಕ್ಷ ದಾವಲಸಾಬ ನಾಗನೂರ, ಉತ್ತರ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಅಧ್ಯಕ್ಷ ರಮೇಶ ಚಲವಾದಿ, ಸಮಾಜ ಸೇವಕರಾದ ಮುರ್ತುಜಾ ಮುಲ್ಲಾ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು. ಹಾಜಿಅಲಿ ಎಚ್.ಕೊಪ್ಪಳ ನಿರ್ವಹಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka